# ಹಂಪಿ ಟೈಮ್ಸ್
HAMPI TIMES

ಕನ್ನಡ ದಿನಪತ್ರಿಕೆ
KANNADA DAILY

ಸಂಪಾದಕ: ಬಸಾಪುರ ಬಸವರಾಜ
EDITOR: BASAPUR BASAVARAJA








ಸಂಪುಟ:01 • ಸಂಚಿಕೆ:218 • ನೋಂದಣಿ ಸಂ.:KARKAN27911 • ವಿಜಯನಗರ • 24.01.2024 • ಬುಧವಾರ • ಪುಟ:04 • ಬೆಲೆ:2
Volume:01 • Issue:218 • Reg.No:KARKAN27911 • VIJAYANAGARA • 24.01.2024 • Wednesday • Page:04 • Rs:2


# ಮಹಿಳಾ ಸಬಲೀಕರಣಕ್ಕೆ ತಾಯಮ್ಮ ಸಂಸ್ಥೆ ಬದ್ಧ

## ಸಂಘದ ಅಧ್ಯಕ್ಷೆ ಕವಿತಾ ಈಶ್ವರ್‌ಸಿಂಗ್ ಹೇಳಿಕೆ | ಜ.26 ತಾಯಮ್ಮ ಶಕ್ತಿ ಸಂಘದ ದಶಮಾನೋತ್ಸವ | ಸಾಧಕರಿಗೆ ಸನ್ಮಾನ

■ **ಹಂಪಿ ಟೈಮ್ಸ್ ಹೊಸಪೇಟೆ**

ತಾಯಮ್ಮ ಶಕ್ತಿ ಸಂಘದ ದಶಮಾನೋತ್ಸವದಂಗವಾಗಿ ನಗರದ ಶ್ರೀ ವೆಂಕಟೇಶ್ವರ ಕಲ್ಯಾಣ ಮಂಟಪದಲ್ಲಿ ಜ.26 ರಂದು ಸಂಜೆ.5ಕ್ಕೆ 10 ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ತಲಾ ಇಬ್ಬರಿಗೆ ಸನ್ಮಾನ, ಟೈಲರಿಂಗ್ ಮತ್ತು ಫ್ಯಾಶನ್ ಡಿಸೈನಿಂಗ್ ತರಬೇತಿ ಪಡೆದು ಸ್ವಾವಲಂಬಿ ಬದುಕು ರೂಪಿಸಿಕೊಂಡ ಮಹಿಳೆಯರಿಗೆ ಪ್ರಮಾಣ ಪತ್ರಗಳನ್ನು ನೀಡಲಾಗುತ್ತದೆ. ಶೀಘ್ರದಲ್ಲೇ 3000 ಮಹಿಳೆಯರಿಗೆ ಉದ್ಯೋಗ ಕಲ್ಪಿಸಿಕೊಡುವ ಉದ್ಯೋಗ ಮೇಳ ಹಮ್ಮಿಕೊಳ್ಳಲಾಗುವುದು ಎಂದು ತಾಯಮ್ಮ ಶಕ್ತಿ ಸಂಘದ ಅಧ್ಯಕ್ಷೆ ಕವಿತಾ ಈಶ್ವರ ಸಿಂಗ್ ಹೇಳಿದರು.

ನಗರದ ಪತ್ರಿಕಾ ಭವನದಲ್ಲಿ ಮಂಗಳವಾರ ಸುದ್ದಿಗೋಷ್ಠಿಯಲ್ಲಿ ಮಾತನಾಡಿದರು. ವಿಜಯನಗರ ಜಿಲ್ಲಾ ಕೇಂದ್ರದಲ್ಲಿ ಮಹಿಳೆಯರು ಸೇರಿದಂತೆ ಯುವಕರಿಗೆ ಉದ್ಯೋಗ ದೊರಕಿಸುವ ನಿಟ್ಟಿನಲ್ಲಿ ಸಂಸ್ಥೆ ಹಲವು ಯೋಜನೆಗಳನ್ನು ರೂಪಿಸುತ್ತಿದೆ. 1000 ಸದಸ್ಯರು ಈಗಾಗಲೇ ನೋಂದಾಯಿಸಿಕೊಂಡಿದ್ದಾರೆ.



ಗ್ರಾಮೀಣ ಹಾಗೂ ನಗರದ ವಾರ್ಡ್‌ಗಳಲ್ಲಿ ಮಹಿಳೆಯರ ಸಮಸ್ಯೆಗಳಿಗೆ ಸ್ಪಂದಿಸಿ, ಸ್ವಾವಲಂಬಿ ಬದುಕು ಕಟ್ಟಿಕೊಳ್ಳಲು ಅಗತ್ಯವಿರುವ ಶಿಕ್ಷಣ, ತರಬೇತಿ ನೀಡುತ್ತಾ ಬರಲಾಗುತ್ತಿದೆ. ಮುಂದಿನ ದಿನಗಳಲ್ಲಿ ಮತ್ತಷ್ಟು ವಿಸ್ತಾರಗೊಳಿಸುವ ನಿಟ್ಟಿನಿಂದ ತಾಯಮ್ಮ ಶಕ್ತಿ ಸಂಘ ಸಂಸ್ಥೆಯಾಗಿ ಕಾರ್ಯನಿರ್ವಹಿಸಲಿದೆ. ಈಗಾಗಲೇ ಸರ್ಕಾರ ಸಹಯೋಗದಲ್ಲಿ ಮಹಿಳೆಯರಿಗೆ ಹೊಲಿಗೆ ತರಬೇತಿ, ಫ್ಯಾಶನ್ ಡಿಸೈನಿಂಗ್ ಕಲಿಸಲಾಗುತ್ತಿದೆ. ಮಹಿಳಾ ಸಬಲೀಕರಣಗೊಸ್ಕರ ಅಗರ ಬತ್ತಿ ತಯಾರಿಸುವ ಘಟಕ ಸ್ಥಾಪಿಸಲಾಗುವುದು. ಪುನೀತ್ ರಾಜಕುಮಾರ ಹೆಸರಲ್ಲಿ ಆಯ್ದ ಗ್ರಾಮೀಣ ಭಾಗದ ಮಕ್ಕಳಿಗೆ ಫ್ರೀ ಟ್ಯೂಷನ್ ಹಮ್ಮಿಕೊಳ್ಳಲಾಗುತ್ತಿದೆ. ರಾಜ್ಯ ಮತ್ತು ಕೇಂದ್ರ ಸರ್ಕಾರಗಳ ಸೌಲಭ್ಯ ಪಡೆದುಕೊಳ್ಳಲು ಮಹಿಳೆಯರಿಗೆ ಅಗತ್ಯ ಅರಿವು, ನೆರವು ನೀಡಲಾಗುತ್ತದೆ. 15 ವರ್ಷಗಳಿಂದ ಸಮಾಜಮುಖಿ ಕಾರ್ಯಗಳಲ್ಲಿ ತೊಡಗಿಸಿಕೊಂಡಿದ್ದೇನೆ. ಜನರ ಸಮಸ್ಯೆಗಳಿಗೆ ಸ್ಪಂದಿಸುವುದರಲ್ಲೆ ಹೆಚ್ಚು ಖುಷಿ ನೀಡುತ್ತಿರುವುದರಿಂದ ಸಂಸ್ಥೆಯನ್ನು ಮತ್ತಷ್ಟು ವಿಸ್ತಾರಗೊಳಿಸಲಾಗುತ್ತಿದೆ ಎಂದರು.

ಕಾರ್ಯಕ್ರಮಕ್ಕೆ ಶಾಸಕ ಎಚ್.ಆರ್.ಗವಿಯಪ್ಪ, ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ, ಎಸ್ಪಿ ಶ್ರೀಹರಿಬಾಬು ಬಿ.ಎಲ್., ನಗರಸಭೆ ಅಧ್ಯಕ್ಷೆ ಲತಾ, ಮುಖಂಡರಾದ ಎಚ್.ಎನ್.ಎಫ್.ಇಮಾಮ್ ನಿಯಾಜಿ, ತಾರಿಹಳ್ಳಿ ಹನುಮಂತಪ್ಪ, ಭಾರತ್ ವಿಕಾಸ ಪರಿಷತ್ ನ ರೇವಣಸಿದ್ದಪ್ಪ, ರಾಮಕೃಷ್ಣ ನಿಂಬಗಲ್, ಭಾಗ್ಯಲಕ್ಷ್ಮಿ ಭರಾಡೆ ಸೇರಿದಂತೆ ಪ್ರಮುಖರು ಭಾಗವಹಿಸಲಿದ್ದಾರೆ.

ಸಂಘದ ಕಾರ್ಯದರ್ಶಿ ಎಸ್.ರಾಘವೇಂದ್ರ ಮಾತನಾಡಿ, ಸಂಘದ ದಶಮಾನೋತ್ಸವ ಮತ್ತು ಕವಿತಾ ಈಶ್ವರಸಿಂಗ್ ಅವರ ಜನ್ಮದಿನದ ನಿಮಿತ್ತ ತಾಯಮ್ಮ ಶಕ್ತಿ ಸಂಘದ ಅಭಿಮಾನಿಗಳು ರಕ್ತದಾನ ಶಿಬಿರ, ಅಂಧ ಮಕ್ಕಳಿಗೆ ನೀರಿನ ಟ್ಯಾಂಕ್ ವಿತರಣೆ, ಪುಸ್ತಕ, ಸಮವಸ್ತ್ರ ವಿತರಣೆ ಸೇರಿದಂತೆ ವಿವಿದೆಡೆ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಂಡಿದ್ದಾರೆ ಎಂದರು.

ಸಂಘದ ಲಲಿತಾ ನಾಯಕ, ರಾಜು ಗುಜ್ಜಲ, ಹನುಮಂತ, ರಘುನಾಯ್ಕ, ರಾಘವೇಂದ್ರ ಕೆ ಇತರರ ಇದ್ದರು.

---

**ಮೈಕ್ರೋ ನ್ಯೂಸ್**

## ಸಚಿವ ಜಮೀರ್ ಖಾನ್ ಪ್ರವಾಸ ಕಾರ್ಯಕ್ರಮ

**ಹಂಪಿ ಟೈಮ್ಸ್ ಹೊಸಪೇಟೆ**



ಜಿಲ್ಲಾ ಉಸ್ತುವಾರಿ ಸಚಿವ ಬಿ.ಜೆಡ್.ಜಮೀರ್ ಅಹ್ಮದ್ ಖಾನ್ ಜ.24 ರಂದು ತಾಲೂಕಿನ ಕಮಲಾಪುರದ ಹೊಟೆಲ್ ಮಯೂರ ಭುವನೇಶ್ವರಿ ಆವರಣದಲ್ಲಿ ಬೆಳಗ್ಗೆ 11 ಗಂಟೆಗೆ ಜನತಾ ದರ್ಶನದಲ್ಲಿ ಭಾಗವಹಿಸುವರು. ನಂತರ ಕಮಲಾಪುರದ ರೈತ ಮುಖಂಡರೊಂದಿಗೆ ಸಮಾಲೋಚನೆ. ಬಳಿಕ 3.30 ರಿಂದ ಸಂಜೆ 04 ಗಂಟೆಯವರೆಗೆ ಹಂಪಿ ವಿಶ್ವವಿದ್ಯಾಲಯಕ್ಕೆ ಭೇಟಿ. ವೈಕುಂಠ ಅತಿಥಿ ಗೃಹದಲ್ಲಿ ವಾಸ್ತವ್ಯ. ಜ.25ರ ಬೆಳಗ್ಗೆ 10 ರಿಂದ 11 ಗಂಟೆಯವರೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣಲ್ಲಿ ಸಭೆ, ಜಿಲ್ಲೆಯ ಬರ ಪರಿಸ್ಥಿತಿಯ ಬಗ್ಗೆ ಜಿಲ್ಲಾಮಟ್ಟದ ಅಧಿಕಾರಿಗಳೊಂದಿಗೆ ಚರ್ಚೆ ನಡೆಸುವರು. ನಂತರ ವಿಜಯನಗರ ಜಿಲ್ಲೆಯ ಕೆಡಿಪಿ ಸಭೆ ನಡೆಸುವರು. ಬಳಿಕ ಹಂಪಿಯಲ್ಲಿ ಮಧ್ಯಾಹ್ನ 3 ರಿಂದ ಸಂಜೆ 5 ಗಂಟೆವರೆಗೆ ಹಂಪಿ ಉತ್ಸವ ಸಿದ್ಧತೆಗಳನ್ನು ಪರಿಶೀಲಿಸುವರು. ಬಳಿಕ ವೈಕುಂಠ ಅತಿಥಿ ಗೃಹದಲ್ಲಿ ವಾಸ್ತವ್ಯ. ಜ. 26ರಂದು ಬೆಳಗ್ಗೆ 8.55ಕ್ಕೆ ಜಿಲ್ಲಾ ಕ್ರೀಡಾಂಗಣದಲ್ಲಿ ಗಣರಾಜ್ಯೋತ್ಸವ ಧ್ವಜಾರೋಹಣದಲ್ಲಿ ಭಾಗವಹಿಸುವರು. ಸಂವಿಧಾನ ಜಾಗೃತಿ ಟ್ಯಾಬ್ಲೋಗೆ ಚಾಲನೆ, ಬಳಿಕ 11.30ಕ್ಕೆ ಬೆಂಗಳೂರಿಗೆ ಪ್ರಯಾಣ ಬೆಳೆಸಲಿದ್ದಾರೆ.

## ದೇವಸ್ಥಾನಗಳಲ್ಲಿ ವಿದ್ಯುತ್ ದೀಪಾಲಂಕಾರ ವ್ಯವಸ್ಥೆ

**ಹಂಪಿ ಟೈಮ್ಸ್ ಬಳ್ಳಾರಿ**

75ನೇ ಗಣರಾಜ್ಯೋತ್ಸವದ ಅಂಗವಾಗಿ ಜಿಲ್ಲೆಯಲ್ಲಿ ಹಿಂದೂ ಧಾರ್ಮಿಕ ದತ್ತಿ ಇಲಾಖೆ ವ್ಯಾಪ್ತಿಗೆ ಒಳಪಡುವ ಎಲ್ಲಾ ಧಾರ್ಮಿಕ ಸಂಸ್ಥೆಗಳು ಹಾಗೂ ದೇವಸ್ಥಾನಗಳಲ್ಲಿ ಜ.25, ಜ.26ರಂದು ವಿದ್ಯುತ್ ದೀಪಾಲಂಕಾರ ವ್ಯವಸ್ಥೆ ಜ.26ರಂದು ವಿಶೇಷ ಪೂಜೆ, ಪ್ರಾರ್ಥನೆ ವ್ಯವಸ್ಥೆಯನ್ನು ಮಾಡಬೇಕು ಎಂದು ಹಿಂದೂ ಧಾರ್ಮಿಕ ದತ್ತಿಗಳ ಇಲಾಖೆಯ ಎಸಿ ಹೆಚ್. ಗಂಗಾಧರಪ್ಪ ತಿಳಿಸಿದ್ದಾರೆ.

---

## ಬೆಳೆಹಾನಿಗೆ 2000 ರೂವರೆಗೆ ಪರಿಹಾರ ಸರ್ಕಾರದಿಂದ ಅನುಮತಿ: ಡಿಸಿ ದಿವಾಕರ

■ **ಹಂಪಿ ಟೈಮ್ಸ್ ಹೊಸಪೇಟೆ**

ರಾಜ್ಯ ಸರ್ಕಾರದಿಂದ 2023ನೇ ಸಾಲಿನ ಮುಂಗಾರು ಹಂಗಾಮಿನ ಬರ ಪರಿಸ್ಥಿತಿ ಹಿನ್ನಲೆಯಲ್ಲಿ ರೈತರಿಗೆ ಬೆಳೆಹಾನಿ ಪರಿಹಾರದ ಮೊದಲನೇ ಕಂತಾಗಿ ಅಥವಾ ಎಸ್‌ಡಿಆರ್‌ಎಫ್/ ಎನ್‌ಡಿಆರ್‌ಎಫ್ ಮಾರ್ಗಸೂಚಿಯಂತೆ ಬೆಳೆಹಾನಿ ಪರಿಹಾರವಾಗಿ ಅರ್ಹತೆಯ ಅನುಗುಣವಾಗಿ ಪ್ರತಿ ರೈತರಿಗೆ ಗರಿಷ್ಟ ರೂ.2000ರವರೆಗೆ ರೈತರಿಗೆ ಪಾವತಿಸಲು ಸರ್ಕಾರವು ಅನುಮತಿ ನೀಡಿದೆ ಎಂದು ಜಿಲ್ಲಾಧಿಕಾರಿ ಎಂ.ಎಸ್.ದಿವಾಕರ ತಿಳಿಸಿದ್ದಾರೆ.



ಮುಂದಿನ ದಿನಗಳಲ್ಲಿ ಕೇಂದ್ರ ಸರ್ಕಾರದಿಂದ ಎನ್‌ಡಿಆರ್‌ಎಫ್ ಅನುದಾನ ಬಿಡುಗಡೆಯಾದ ನಂತರ ಎಸ್‌ಡಿಆರ್‌ಎಫ್ ಮಾರ್ಗಸೂಚಿಗಳ ಪ್ರಕಾರ ಹೆಚ್ಚುವರಿ ಮೊತ್ತಕ್ಕೆ ಅರ್ಹತೆಯಿರುವ ರೈತರಿಗೆ ಹೆಚ್ಚುವರಿ ಬೆಳೆಹಾನಿ ಪರಿಹಾರ ಬಿಡುಗಡೆಗೊಳಿಸಲಾಗುವುದು ಎಂದು ರಾಜ್ಯ ಸರ್ಕಾರ ತಿಳಿಸಿದೆ. ಸರ್ಕಾರದ ನಿರ್ದೇಶನದಂತೆ ವಿಜಯನಗರ ಜಿಲ್ಲೆಯಲ್ಲಿ 2023ನೇ ಸಾಲಿನ ಮುಂಗಾರು ಹಂಗಾಮಿನ ಬರ ಪರಿಸ್ಥಿತಿ ಹಿನ್ನಲೆಯಲ್ಲಿ ರೈತರಿಗೆ ಬೆಳೆ ಸಮೀಕ್ಷೆಯಲ್ಲಿ ಎಫ್.ಐ.ಡಿ ಹೊಂದಿರುವ ರೈತರ ಮಾಹಿತಿಯನ್ನಾಧರಿಸಿ ಪರಿಹಾರ ತಂತ್ರಾಂಶದ ಮೂಲಕ ಹಂತಹಂತವಾಗಿ ಪರಿಹಾರ ವಿತರಣೆ ಪ್ರಕ್ರಿಯೆ ಪ್ರಾರಂಭವಾಗಿದ್ದು, ಅದರಂತೆ ಮೂರು ಹಂತಗಳಲ್ಲಿ ಒಟ್ಟು 1,00,333 ರೈತರಿಗೆ 19,77,13,264 ರೂ.ಗಳ ಇನಪುಟ್ ಸಬ್ಸಿಡಿಯನ್ನು ಜಮೆ ಮಾಡಲು ಅನುಮೋದನೆ ನೀಡಲಾಗಿದ್ದು, ಸರ್ಕಾರದಿಂದ ನೇರವಾಗಿ ಆಧಾರ್ ಸಂಖ್ಯೆ ಹೊಂದಿರುವ ರೈತರ ಬ್ಯಾಂಕ್ ಖಾತೆಗಳಿಗೆ ಪರಿಹಾರ ಧನವನ್ನು ಜಮೆ ಮಾಡಿರುತ್ತಾರೆ ಹಾಗೂ ಬಾಕಿ ಉಳಿದ ರೈತರಿಗೆ ಹಂತಹಂತವಾಗಿ ಪರಿಹಾರ ನೀಡುವುದು ಪ್ರಗತಿ ಹಂತದಲ್ಲಿದ್ದು ತುರ್ತಾಗಿ ಕ್ರಮ ಕೈಗೊಳ್ಳಲಾಗುವುದು. ಹೆಚ್ಚಿನ ಮಾಹಿತಿಗಾಗಿ ಆಯಾ ತಹಶೀಲ್ದಾರ ಕಾರ್ಯಾಲಯಕ್ಕೆ ಭೇಟಿ ನೀಡಬಹುದು.

---

## ಹೆಣ್ಣು ಮಗುವಿನ ಜನ್ಮೋತ್ಸವ

### ಜ.24ರಂದು ಮಧ್ಯಾಹ್ನ 1 ಗಂಟೆಗೆ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಕಾರ್ಯಕ್ರಮ

■ **ಹಂಪಿ ಟೈಮ್ಸ್ ಬಳ್ಳಾರಿ**

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಸಾರ್ವಜನಿಕ ಶಿಕ್ಷಣ ಇಲಾಖೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಹಾಗೂ ಜಿಲ್ಲಾ ಆಸ್ಪತ್ರೆ ಇವರ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಹೆಣ್ಣು ಮಕ್ಕಳ ದಿನಾಚರಣೆ ಪ್ರಯುಕ್ತ ಬೇಟಿ ಬಚಾವೋ ಬೇಟಿ ಪಡಾವೋ ಅಭಿಯಾನ 2023-24 ದಡಿ "ಹೆಣ್ಣು ಮಗುವಿನ ಜನ್ಮೋತ್ಸವ" ಕಾರ್ಯಕ್ರಮ ಜ.24ರಂದು ಮಧ್ಯಾಹ್ನ 1 ಗಂಟೆಗೆ ಜಿಲ್ಲಾ ಆಸ್ಪತ್ರೆ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.



ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು ಹಾಗೂ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಅಧ್ಯಕ್ಷರಾದ ಎಸ್.ಹೆಚ್.ಪುಷ್ಪಾಂಜಲಿ ದೇವಿ ಅವರು ಕಾರ್ಯಕ್ರಮ ಉದ್ಘಾಟಿಸುವರು. ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಅಧ್ಯಕ್ಷತೆ ವಹಿಸುವರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರದ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ, ಮಹಾನಗರ ಪಾಲಿಕೆ ಆಯುಕ್ತ ಜಿ.ಖಲೀಲ್ ಸಾಬ್, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣಾಧಿಕಾರಿ ಡಾ.ವೈ.ರಮೇಶ್‌ಬಾಬು, ಜಿಲ್ಲಾ ಶಸ್ತ್ರ ಚಿಕಿತ್ಸಕ ಡಾ.ಬಸರೆಡ್ಡಿ, ಸಾರ್ವಜನಿಕ ಶಿಕ್ಷಣ ಇಲಾಖೆಯ ಉಪನಿರ್ದೇಶಕರಾದ ಉಮಾದೇವಿ, ಜಿಲ್ಲಾ ಮಕ್ಕಳ ರಕ್ಷಣಾ ಘಟಕದ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಾಮಕೃಷ್ಣ ನಾಯಕ ಸೇರಿದಂತೆ ಇತರರು ಉಪಸ್ಥಿತರಿರುತ್ತಾರೆ ಎಂದು ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕ ವಿಜಯ್‌ಕುಮಾರ್ ಕೆ.ಹೆಚ್ ತಿಳಿಸಿದ್ದಾರೆ.

---






## ಆರೋಗ್ಯ ರಕ್ಷಣೆಗೆ ಯಶಸ್ವಿನಿ ಕಾರ್ಡ್ ಅವಶ್ಯ



■ **ಹಂಪಿ ಟೈಮ್ಸ್ ಕೂಡ್ಲಿಗಿ**

ಸಾಮಾನ್ಯ ರೈತರು ಯಶಸ್ವಿನಿ ಕಾರ್ಡ್ ಹೊಂದಿದರೇ, ಸುಸಜ್ಜಿತ ಆಸ್ಪತ್ರೆಗಳ ಆರೋಗ್ಯ ಸೌಲಭ್ಯಗಳ ಅವಕಾಶವನ್ನು ಪಡೆದುಕೊಳ್ಳಲು ಸಹಕಾರಿ ಯಾಗಲಿದೆ ಎಂದು ಶಾಸಕ ಡಾ.ಎನ್.ಟಿ.ಶ್ರೀನಿವಾಸ ಹೇಳಿದರು.

ಪಟ್ಟಣದ ಪ್ರವಾಸಿ ಮಂದಿರದಲ್ಲಿ ಮಂಗಳವಾರ ಬಳ್ಳಾರಿ ಜಿಲ್ಲಾ ಸಹಕಾರ ಕೇಂದ್ರ ಬ್ಯಾಂಕ್ ನಿ. ಹೊಸಪೇಟೆ ಮತ್ತು ಕೂಡ್ಲಿಗಿ ತಾಲೂಕು ಪ್ರಾಥಮಿಕ ಕೃಷಿ ಪತ್ತಿನ ಸಹಕಾರ ಸಂಘಗಳ ಒಕ್ಕೂಟ ಹಮ್ಮಿಕೊಂಡಿರುವ "ಯಶಸ್ವಿನಿ ಆರೋಗ್ಯ ರಕ್ಷಣಾ ವಿಮಾ ಯೋಜನೆಯ" ನೋಂದಣಿ ಅಭಿಯಾನ 2024 ಕಾರ್ಯಕ್ರಮಕ್ಕೆ ಚಾಲನೆ ನೀಡಿ ಮಾತನಾಡಿದರು. ಎಸ್ಸಿ, ಎಸ್ಟಿ ಸಮುದಾಯದವರಿಗೆ ಯಶಸ್ವಿನಿ ಕಾರ್ಡ್ ಪಡೆಯಲು ಉಚಿತ ಇದ್ದು, ಸಾಮಾನ್ಯ ವರ್ಗದ ಕುಟುಂಬಕ್ಕೆ ಶುಲ್ಕ ಇದೆ. ಮುಂದಿನ ದಿನಗಳಲ್ಲಿ ಕೂಡ್ಲಿಗಿ ಕ್ಷೇತ್ರದಲ್ಲಿ ಸುಮಾರು 35 ಸಾವಿರ ಕುಟುಂಬಗಳು ನಿಗದಿತ ಗುರಿ ಇಟ್ಟುಕೊಂಡು ಯಶಸ್ವಿನಿ ಕಾರ್ಡ್ ನೋಂದಾಯಿಸಲು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಬಿಡಿಸಿಸಿ ಬ್ಯಾಂಕ್ ಜಿಲ್ಲಾಧ್ಯಕ್ಷ ಗುಂಡುಮುಣುಗು ಕೆ.ತಿಪ್ಪೇಸ್ವಾಮಿ ಮಾತನಾಡಿ, ಕೃಷಿಕರಿಗೆ ಹಾಗೂ ಮಧ್ಯಮ ವರ್ಗದ ಜನರಿಗೆ ಯಶಸ್ವಿನಿ ಆರೋಗ್ಯ ಕಾರ್ಡ್ ಅತ್ಯಂತ ಸಹಕಾರಿ ಯಾಗಿದ್ದು, ಅನಾರೋಗ್ಯ ಸಮಯದಲ್ಲಿ ಶಸ್ತ್ರ ಚಿಕಿತ್ಸೆ ಸೇರಿದಂತೆ ಆರೋಗ್ಯಕ್ಕೆ ಸಂಭಂದಿಸಿದ ಇತರೆ ಲಾಭಗಳನ್ನು ಇದರಿಂದ ಪಡೆಯಬಹುದು. ಸರ್ಕಾರದ ಮಹತ್ವದ ಯೋಜನೆ ಇದಾಗಿರುವುದರಿಂದ ಪ್ರತಿಯೊಬ್ಬರೂ ಇದರ ಸದು ಉಪಯೋಗ ಪಡೆದುಕೊಳ್ಳಬೇಕು ಎಂದು ತಿಳಿಸಿದರು. ಯಶಸ್ವಿನಿ ಜಿಲ್ಲಾ ಸಂಯೋಜಕ ಉಮೇಶ್, ಸಿಡಿಓ ನಾಗರಾಜ, ಕ್ಷೇತ್ರಧಿಕಾರಿಗಳಾದ ಕೆ.ಕನಕಪ್ಪ, ಎಂ.ಕೊಟ್ರೇಶ್, ವ್ಯವಸ್ಥಾಪಕ ಸುನೀಲ್, ತಾಲೂಕಿನ ಕೃಷಿ ಪತ್ತಿನ ಸಹಕಾರ ಸಂಘಗಳ ಅಧ್ಯಕ್ಷರುಗಳು ಹಾಗೂ ಕಾರ್ಯದರ್ಶಿಗಳು, ಯಶಸ್ವಿನಿ ಕಾರ್ಡಿನ ಫಲಾನುಭವಿಗಳು




## ವಚನ ಅರಿವು

### ಯಾರು ಪಾವನರು?

**ಒಬ್ಬರ ಮನವ ನೋಯಿಸಿ,**
**ಒಬ್ಬರ ಮನವ ಘಾತವ ಮಾಡಿ,**
**ಗಂಗೆಯ ಮುಳುಗಿದಡೇನಾಗುವುದಯ್ಯಾ?**
**ಚಂದ್ರನು ಗಂಗೆಯ ತಡಿಯಲ್ಲಿದ್ದಡೇನು?**
**ಕಲಂಕ ಬಿಡದಾಯಿತ್ತಯ್ಯಾ.**
**ಅದು ಕಾರಣ, ಮನವ ನೋಯಿಸದವನೆ,**
**ಒಬ್ಬರ ಘಾತವ ಮಾಡದವನೆ,**
**ಪರಮಪಾವನ ನೋಡಾ, ಕಪಿಲಸಿದ್ಧಮಲ್ಲಿಕಾರ್ಜುನಾ.**
**– ಸಿದ್ಧರಾಮೇಶ್ವರ**

ಇನ್ನೊಬ್ಬರಿಗೆ ಮೋಸ, ವಂಚನೆ ಮಾಡಿ, ಅವರಿವರಿಗೆ ತೊಂದರೆ ಮಾಡಿ, ಮನಸ್ಸನ್ನು ನೋಯಿಸಿ, ಮಾಡಬಾರದ ಕೆಲಸವನ್ನು ಮಾಡಿ ಗಂಗಾನದಿಯಲ್ಲಿ ಸ್ನಾನ ಮಾಡಿದರೆ ಪುಣ್ಯ ಬರುವುದಿಲ್ಲ. ಹಾಗೆಯೇ ಪುಣ್ಯ ಬರುವುದಿದ್ದರೆ ಚಂದ್ರ ಗಂಗೆಯ ದಡದಲ್ಲಿದ್ದರು ಅವನು ಮಾಡಿದ ತಪ್ಪಿಗೆ, ಪಾಪಕ್ಕೆ ಶಿಕ್ಷೆ ತಪ್ಪಲಿಲ್ಲ. ಇನ್ನೊಬ್ಬರ ಜೀವನ ಹಾಳುಮಾಡಿ, ತನ್ನ ಸ್ವಾರ್ಥಕ್ಕಾಗಿ ಇನ್ನೊಬ್ಬರಿಗೆ ಮೋಸ, ವಂಚನೆ ಮಾಡಿದವರಿಗೆ ಶಿಕ್ಷೆ ಕಟ್ಟಿಟ್ಟ ಬುತ್ತಿ ಎಂಬ ಎಚ್ಚರಿಕೆ ಬೇಕು. ಆದ್ದರಿಂದ ಯಾರಿಗೂ ಮೋಸ ಮಾಡದೆ, ತೊಂದರೆ ಕೊಡದೆ, ನೈತಿಕ ಮಾರ್ಗ ಹಿಡಿದು ಬದುಕುವವರೆ ಪರಮ ಪಾವನರು ಎನ್ನುತ್ತಾನೆ ಶರಣ ಸಿದ್ಧರಾಮೇಶ್ವರ.

(ಡಾ. ನಂದೀಶ್ವರ ದಂಡೆ ಅವರ ವಚನ ಜೀವನ ಮಾರ್ಗ ಪುಸ್ತಕದಿಂದ)

## ಆಸ್ತಿಗಿಂತ ಆರೋಗ್ಯ ಸಂಪಾದನೆ ಮುಖ್ಯ : ಡಾ.ಜಿ.ಎಂ.ಸೋಮೇಶ್ವರ




**ಹಂಪಿ ಟೈಮ್ಸ್ ಮರಿಯಮ್ಮನಹಳ್ಳಿ:**
ಪ್ರತಿಯೊಬ್ಬರು ಆರೋಗ್ಯದ ಬಗ್ಗೆ ಹೆಚ್ಚು ಕಾಳಜಿವಹಿಸಬೇಕು ಎಂದು ಎಸ್. ಎಲ್. ಆರ್. ಮೆಟಾಲಿಕ್ಸ್ ಕಂಪನಿಯ ವೈದ್ಯ ಡಾ. ಜಿ. ಎಂ. ಸೋಮೇಶ್ವರ ಹೇಳಿದರು.

ಇಲ್ಲಿಗೆ ಸಮೀಪದ ಲೋಕಪ್ಪನಹೊಲ ಗ್ರಾಮದಲ್ಲಿ ಸೋಮವಾರ ಎಸ್. ಎಲ್. ಆರ್. ಮೆಟಾಲಿಕ್ಸ್ ಕಂಪನಿಯ ಸಿ.ಎಸ್.ಆರ್ ಯೋಜನೆ ಅಡಿಯಲ್ಲಿ ಸಂಚಾರಿ ಆರೋಗ್ಯ ಘಟಕ ಮತ್ತು ನಿರುದ್ಯೋಗ ಯುವಕರಿಗೆ ಲಘು ವಾಹನ ಚಾಲನ ತರಬೇತಿ ಕಾರ್ಯಕ್ರಮಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು. ಹಣ, ಆಸ್ತಿ ಹೇಗೆ ಬೇಕಾದರು ಸಂಪಾದನೆ ಮಾಡಬಹುದು, ಆದ್ರೆ ಆರೋಗ್ಯ ಸಂಪಾದನೆ ಮಾಡುವುದಕ್ಕೆ ಸಾಧ್ಯವಿಲ್ಲ, ಆರೋಗ್ಯವನ್ನು ನಾವೇ ಕಾಪಾಡಿಕೊಳ್ಳಬೇಕು ಎಂದರು.

ಈ ಸಂದರ್ಭದಲ್ಲಿ ಸ್ಥಳೀಯ ಗ್ರಾಮ ಪಂಚಾಯತಿ ಸದಸ್ಯರಾದ ಸೋಗಿ ನಾಗರಾಜ್, ಸೋಮಪ್ಪ, ಸ್ಥಳೀಯ ಮುಖಂಡರಾದ ಸಿ. ಹನುಮಂತಪ್ಪ, ಬಸವರಾಜಪ್ಪ, ದಾಸರ ಮಂಜುನಾಥ, ಕೆ.ಬಿ. ಸತೀಶ್, ಟಿ. ಹನುಮಂತಪ್ಪ,ಕೆ. ಬಿ. ಮಹೇಶ್, ಸಂಕ್ರಪ್ಪ,

ಎಸ್. ಎಲ್. ಆರ್. ಮೆಟಾಲಿಕ್ಸ್ ಕಂಪನಿಯ ವೈದ್ಯ ಡಾ. ಶರತ್, ಸಿಎಸ್.ಆರ್ ಸಿಬ್ಬಂದಿಗಳಾದ ವಿಠ್ಠಲ್, ಮಲ್ಲಿಕಾರ್ಜುನ ಕೆ, ಮಾರುತಿ ಘೋಷಿ ಹಾಗೂ ಗ್ರಾಮದ ಮುಖಂಡರು ಮತ್ತು ಯುವಕರು ಈ ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

### ಮಕ್ಕಳು ಅರಸರಾಗಬೇಕೆ?

**ಓದಲು ಸಮಯವಿಲ್ಲವೆಂದು ಪತ್ರಿಕೆಯನ್ನು ಕೈ ಬಿಡಬಾರದು, ಕನ್ನಡ ಪತ್ರಿಕೆಯೊಂದು ಕೈಯಲ್ಲಿಡಿದರೆ, ಹಿರಿಯರನ್ನು ಅನುಸರಿಸುವ ಮಕ್ಕಳು ಮೊಬೈಲ್ ಬಿಟ್ಟು ಅಕ್ಷರ ದಾಸರಾಗುತ್ತಾರೆ. ಅಕ್ಷರ ದಾಸರಾದರೆ ಅರಸರು ಆಗಬಲ್ಲರಲ್ಲವೇ ?**

### ನೀವೂ ಬರೆಯಬಹುದು

ಹಂಪಿ ಟೈಮ್ಸ್ ಪತ್ರಿಕೆ ಆರಂಭಿಸಿದ್ದು ನಾವಾದರೂ, ಕೈಹಿಡಿದು ನಡೆಸುವವರು ನೀವು. ನಮ್ಮ ಇಚ್ಛೆಯೂ ಒಳಗೊಂಡಂತೆ ನಿಮ್ಮ ಆಶಯಗಳಿಗೆ ತಕ್ಕಂತೆ ಪತ್ರಿಕೆಯನ್ನು ರೂಪಿಸುವ ಹೊಣೆಗಾರಿಕೆ, ಜವಾಬ್ದಾರಿಯೂ ನಮ್ಮದಾಗಿದೆ. ಇಲ್ಲಿ ಕೇವಲ ನಮ್ಮ ಬರವಣಿಗೆ ಅಷ್ಟೇ ಅಲ್ಲದೇ, ಬರಹಗಾರರಾಗಿದ್ದರೆ ನೀವೂ ಕೂಡ ನಿಮ್ಮ ಬರಹವನ್ನಿಲ್ಲಿ ಓದಬಹುದು. ಈ ನಿಟ್ಟಿನಲ್ಲಿ ನಿಮ್ಮಿಂದ ಕತೆ, ಕವನ, ವಿವಿಧ ಪ್ರಕಾರದ ಸಾಹಿತ್ಯ ಹಾಗೂ ಮಹಿಳಾ ಮತ್ತು ಮಕ್ಕಳ ಪರ ಚಿಂತನೆ ಒಳಗೊಂಡ ಲೇಖನಗಳನ್ನು ನಾವು ನಿರೀಕ್ಷಿಸುತ್ತಿದ್ದೇವೆ. ಜೊತೆಗೆ ಬಹುಮುಖ್ಯವಾಗಿ ಈ ನೆಲದ ಜನರ ಧ್ವನಿಯಾಗುವ ಹಂಬಲದಿಂದ ಸಾರ್ವಜನಿಕ ಕುಂದು ಕೊರತೆಗಳನ್ನು ಹೇಳಿಕೊಳ್ಳಬಹುದು. ಓದುಗ ಪ್ರಭುಗಳಾದ ನೀವು ಪತ್ರಿಕೆಯ ಭಾಗವೂ ಹೌದು. ಹೀಗಾಗಿ ನಿಮ್ಮ ಪ್ರತಿಕ್ರಿಯೆಯೂ ನಮಗೆ ಅತ್ಯಮೂಲ್ಯ. **ಕಥೆ, ಕವನ, ಸಾಹಿತ್ಯ, ತಂತ್ರಜ್ಞಾನ, ಆರೋಗ್ಯ, ಶಿಕ್ಷಣ, ಕ್ರೀಡೆ, ಕೃಷಿ, ಅಪರೂಪದ ವ್ಯಕ್ತಿಗಳು, ಅಂಕಣ, ಮಹಿಳೆ ಮತ್ತು ಮಕ್ಕಳು ಸೇರಿದಂತೆ ವಿವಿಧ ಕ್ಷೇತ್ರಗಳ** ಕುರಿತಾದ ನಿಮ್ಮ ಬರಹಗಳನ್ನೆಲ್ಲ ಸ್ವೀಕರಿಸುತ್ತೇವೆ ಆದರೆ, ಕಳುಹಿಸಿದ ಬರಹಗಳಲ್ಲಿ ಸಮಂಜಸ ಎನಿಸುವುದಷ್ಟೇ ಪ್ರಕಟಿಸುತ್ತೇವೆ. ನಮ್ಮ ನಂಬುಗೆಯ ಸಮಾಜಕ್ಕಾಗಿ ಒಳಿತನ್ನೇ ಬಯಸುತ್ತ, ಬರೆಯುತ್ತ ಎಲ್ಲರೂ ಒಳ ಗೊಳ್ಳೋಣ.

ಸಂಪಾದಕರು

**ಹಂಪಿ ಟೈಮ್ಸ್, ಶ್ರೀ ಓಂಕಾರೇಶ್ವರ ದೇವಸ್ಥಾನದ ಪಕ್ಕದಲ್ಲಿ, ವಾಲ್ಮೀಕಿ ವೃತ್ತದ ಹತ್ತಿರ, ಹೊಸಪೇಟೆ, ವಿಜಯನಗರ ಜಿಲ್ಲೆ.**
ಇ-ಮೇಲ್:hampitimes@gmail.com
M: 9448633038

# ಅಗಾಥಾ ಕ್ರಿಸ್ಟಿ... ಜನಪ್ರಿಯ ಲೇಖಕಿ

35ರ ಹರೆಯದ ಆ ಹೆಣ್ಣು ಮಗಳು ತನ್ನ ತಾಯಿಯ ಸಾವಿನಿಂದ ಇನ್ನೂ ಚೇತರಿಸಿಕೊಂಡಿರಲಿಲ್ಲ, ಅಷ್ಟರಲ್ಲಿಯೇ ಆಕೆಯೊಂದಿಗೆ ಮದುವೆಯಾಗಿ 12 ವರ್ಷಗಳ ಕಾಲ ಸಂಸಾರ ಮಾಡಿದ್ದ ಆಕೆಯ ಪತಿ ಇದ್ದಕ್ಕಿದ್ದಂತೆಯೇ ತಾನು ಮತ್ತೋರ್ವ ಯುವತಿಯನ್ನು ಪ್ರೀತಿಸುತ್ತಿದ್ದೇನೆ ಆಕೆಯನ್ನು ವಿವಾಹವಾಗಲು ನಿನ್ನೊಂದಿಗೆ ವಿಚ್ಛೇದನ ಅಗತ್ಯ ಎಂದು ಹೇಳಿದಾಗ ಆಕೆಯ ಕಾಲ ಕೆಳಗಿನ ನೆಲವೇ ಕುಸಿದಂತಾಯಿತು. ತೀವ್ರವಾದ ಖಿನ್ನತೆಯಿಂದ ಆಕೆ ಬಳಲಿದಳು. ಈ ಅವಳಿ ಆಘಾತಗಳನ್ನು ಸಹಿಸಿಕೊಳ್ಳಲು ಮತ್ತು ಜೀವನದಲ್ಲಿ ಮುಂದೆ ನಡೆಯಲು ಆಕೆಗೆ ಇದ್ದ ಏಕೈಕ ಆಸರೆ ಎಂದರೆ ಆಕೆಯ ಏಳು ವರ್ಷದ ಮಗಳು ಮಾತ್ರ. ಎಷ್ಟೋ ಬಾರಿ ಆತ್ಮಹತ್ಯೆ ಮಾಡಿಕೊಳ್ಳಬೇಕೆಂಬ ಆಕೆಯ ಅಗಾಧ ಹಂಬಲ ಪುಟ್ಟ ಮಗಳನ್ನು ನೋಡಿದ ಕೂಡಲೇ ಕಾದ ಹೆಂಚಿಗೆ ನೀರೆರೆದಂತೆ ತಣ್ಣಗಾಗುತ್ತಿತ್ತು. ಬದುಕಿನಲ್ಲಿ ಮತ್ತೆ ಭರವಸೆಯನ್ನು ತುಂಬಿ ಚೇತನಾವಸ್ಥೆಗೆ ದೂಡುತ್ತಿತ್ತು.

ತನ್ನ ಅತ್ಯಂತ ನೋವಿನ ದಿನಗಳನ್ನು ಅಜ್ಞಾತವಾದ ಸ್ಥಳದಲ್ಲಿ ಕಳೆದ ಆಕೆ ಮುಂದೆ ಜಗತ್ತಿನ ಅತ್ಯಂತ ಜನಪ್ರಿಯ ಲೇಖಕಿಯಾಗಿ ಹೊರಹೊಮ್ಮುತ್ತಾಳೆ. ಆಕೆಯ ಕಾದಂಬರಿಗಳ 200 ಮಿಲಿಯನ್ನೂ ಹೆಚ್ಚು ಪ್ರತಿಗಳು ಬಿಕಾರಿಯಾಗುತ್ತವೆ..... ಆಕೆಯೇ ಜಗತ್ತಿನ ಅತ್ಯಂತ ಜನಪ್ರಿಯ ಲೇಖಕಿ ಅಗಾಥಾ ಕ್ರಿಸ್ಟೀ.

ಅತ್ಯಂತ ಶ್ರೀಮಂತ ಕುಟುಂಬದಲ್ಲಿ 1890ರಲ್ಲಿ ಜನಿಸಿದ ಅಗಾಥಾ ಮಿಲ್ಲರ್ ತೀವ್ರ ಚಟುವಟಿಕೆಯ ಮಗುವಾಗಿದ್ದಳು. ಕೇವಲ 4ನೇ ವಯಸ್ಸಿನಲ್ಲಿ ಓದಲು ಕಲಿತ ಆಕೆ ಪುಸ್ತಕಗಳಲ್ಲಿ ಮುಳುಗಿ ಹೋಗುತ್ತಿದ್ದಳು. ಅತ್ಯಂತ ಆಸಕ್ತಿಯಿಂದ ಕಥೆ ಪುಸ್ತಕಗಳನ್ನು ಓದುತ್ತಿದ್ದ ಆಕೆ ಕ್ರಮೇಣ ತನ್ನ ಆಸಕ್ತಿಯ ಹರಹನ್ನು ವಿಸ್ತರಿಸಿಕೊಂಡಳು.

ಮುಂದೆ ತನ್ನ 22ನೇ ವಯಸ್ಸಿನಲ್ಲಿ ಆರ್ಚಿ ಕ್ರಿಸ್ಟಿ ಎಂಬ ಪೈಲೆಟ್ ಓರ್ವನನ್ನು ಭೇಟಿಯಾದ ಅಗಾಥಾ, ಇಬ್ಬರ ಪರಿಚಯ ಸ್ನೇಹಕ್ಕೆ ತಿರುಗಿ ಸ್ನೇಹ ಪರಿಣಯವಾಗಲು ಹೆಚ್ಚು ಕಾಲ ಹಿಡಿಯಲಿಲ್ಲ. 1914ರ ಕ್ರಿಸ್ಮಸ್ ಸಂದರ್ಭದಲ್ಲಿ ಇವರ ವಿವಾಹ ನೆರವೇರಿತು. ಮುಂದಿನ ನಾಲ್ಕು ವರ್ಷಗಳು ಅವರ ಜೀವನದ ಸಂತಸಮಯ ಕಾಲ.

ಆದರೆ ವಿಶ್ವ ಸಮರ ಕೆಲ ವರ್ಷಗಳ ಕಾಲ ಅವರನ್ನು ಬೇರ್ಪಡಿಸಿತು



ಸುಮಾರು ನಾಲ್ಕು ವರ್ಷಗಳ ಕಾಲ ವಿಶ್ವಯುದ್ಧದ ಸಮಯದಲ್ಲಿ ಅವರಿಬ್ಬರು ತಂತಮ್ಮ ಕರ್ತವ್ಯಗಳಲ್ಲಿ ನಿರತರಾಗಿ ದೂರವಾಗಿದ್ದರು. ಆದರೆ ಅವರ ಪ್ರೀತಿ ಇನ್ನೂ ಹೆಚ್ಚುತ್ತ ಹೋಯಿತು. ಪ್ರಥಮ ವಿಶ್ವ ಯುದ್ಧದಲ್ಲಿ ದಾದಿಯಾಗಿ ಕಾರ್ಯನಿರ್ವಹಿಸಿದಳು ಅಗಾಥ. ನಂತರ 1919 ರಲ್ಲಿ ಲಂಡನ್ ನಲ್ಲಿ ನೆಲೆಸಿದ ದಂಪತಿಗಳಿಗೆ ರೋಜಾ ಲಿಂಡ್ ಎಂಬ ಹೆಣ್ಣು ಮಗುವಿನ ಜನನವಾಯಿತು. ಮಗಳನ್ನು ಬೆಳೆಸುತ್ತಲೆ ತನ್ನ ಓದಿನ ಪ್ರೀತಿಯನ್ನು ಬರಹಗಳನ್ನು ಬರೆಯುವ ಮೂಲಕ ತೋರಿದ ಅಗಾಥಾ ಹಲವಾರು ಪತ್ತೆದಾರಿ ಕಾದಂಬರಿಗಳನ್ನು ಬರೆದರು. ಆದರೆ ಆ ಕಾದಂಬರಿಗಳು ಓದುಗರನ್ನು ತಲುಪುವಲ್ಲಿ ಅ... ಅಷ್ಟೇನೂ ಉತ್ತಮ ಮಟ್ಟದ ಪ್ರತಿಕ್ರಿಯೆ ಆಕೆಗೆ ದೊರೆಯಲಿಲ್ಲ.

ಇದರಿಂದ ಅಷ್ಟೇನೂ ನಿರುತ್ಸಾಹಗೊಳ್ಳದ ಅಗಾಥ ಮಗಳ ಲಾಲನೆ ಪಾಲನೆಯಲ್ಲಿ ತನ್ನನ್ನು ತಾನು ತೊಡಗಿಸಿಕೊಂಡಳು. ನಂತರ ನಡೆದದ್ದು ಇತಿಹಾಸ. ತಾಯಿಯನ್ನು ಕಳೆದುಕೊಂಡ ಕೆಲವೇ ದಿನಗಳಲ್ಲಿ ಪತಿ ಕೂಡ ಆಕೆಗೆ ವಿಚ್ಛೇದನ ನೀಡಿ ಆಕೆಯ ಬದುಕಿನಿಂದ ದೂರವಾದಾಗ ಮುಳುಗುತ್ತಿದ್ದ ಆಕೆಯ ಬದುಕಿನ ನಾವೆಗೆ ಚುಕ್ಕಾಣಿಯಂತೆ ಗೋಚರಿಸಿದ್ದು ಆಕೆಯ ಮಗಳು ರೋಸಲಿಂಡಾ



**ವೀಣಾ ಹೇಮಂತಗೌಡ ಪಾಟೀಲ್, ಮುಂಡರಗಿ, ಗದಗ**

ಮಾತ್ರ.

ಬದುಕಿನಲ್ಲಿ ಉಂಟಾದ ಎರಡೆರಡು ಆಘಾತಗಳ ನೋವಿನಿಂದ ಚೇತರಿಸಿಕೊಳ್ಳಲು ಮತ್ತೆ ಬರವಣಿಗೆಯನ್ನು ಪ್ರಾರಂಭಿಸಿದ ಅಗಾಥ ತನ್ನ ಉತ್ಸಾಹವನ್ನು ಹೆಚ್ಚಿಸಿಕೊಳ್ಳಲು ಓರಿಯಂಟ್ ಎಕ್ಸ್ಪ್ರೆಸ್ ನಲ್ಲಿ ಪ್ರವಾಸ ಕೈಗೊಂಡಳು. ಮತ್ತಷ್ಟು ಮಾಗಿದ ಅನುಭವಗಳನ್ನು ಹೊಂದಿದ ಆಕೆ ನವ ಚೇತನದಿಂದ ಮತ್ತೆ ಬರೆಯಲಾರಂಭಿಸಿದಳು.

ಒಂದರ ಹಿಂದರಂತೆ ಆಘಾತಗಳನ್ನು ಕಂಡ ಆಕೆ ಇನ್ನು ಮುಂದೆ ತನ್ನ ಜೀವನ ಸುಖಕರವಾಗಿರುವುದಿಲ್ಲ ಎಂದು ಕೊಂಡಿದ್ದಳು ಆದರೆ ಆಕೆಗೆ ಆಶ್ಚರ್ಯ ಎನಿಸುವಂತೆ ಆಕೆಯ ಬದುಕು ವಿಭಿನ್ನ ತಿರುವುಗಳನ್ನು ಕೊಂಡುಕೊಂಡಿತು. ಜಗತ್ತಿನ ಅತಿ ದೊಡ್ಡ ಬೆಸ್ಟ್ ಸೆಲ್ಲರ್ ಕಾದಂಬರಿಗಳನ್ನು ಬರೆದ ಕೀರ್ತಿ ಇಂದಿಗೂ ಅಗಾಥಾ ಪಾಲಿಗಿದೆ. ಅತ್ಯಂತ ದೀರ್ಘಾವಧಿಯ ನಾಟಕ ರಚನೆ ಆಕೆಯದು. ಆಕೆಯ ಸಮಯದಲ್ಲಿ ಅಘಾತ ಕ್ರಿಸ್ತಿಯ ಮಿಲಿಯಗಟ್ಟಲೆ ಓದುಗ ವರ್ಗ ಆಕೆಯ ಪುಸ್ತಕಗಳನ್ನು ಖರೀದಿಸಿ ಓದುತ್ತಿತ್ತು.

ಹೀಗೆ ಪ್ರವಾಸ ಬರಹ, ಓದು, ಮಗಳನ್ನು ಬೆಳೆಸುವುದರ ಮಧ್ಯೆ ಆಕೆ ಮಗ್ನಳಾಗಿದ್ದಾಗ 1930ರಲ್ಲಿಆಕೆಯ ಸ್ನೇಹಿತರೊಬ್ಬರು ಇರಾಕ್ ನಲ್ಲಿನ ಪುರಾತತ್ವ ಶಾಸ್ತ್ರದ ಅಗೆಯುವಿಕೆಯ ಕುರಿತು ಬರೆಯಲು ಸ್ಥಳಕ್ಕೆ ಆಹ್ವಾನಿಸಿದರು. ಅಲ್ಲಿ ಆಕೆ ತನಗಿಂತ 13 ವರ್ಷ ಕಿರಿಯರಾದ ಪುರಾತತ್ವಶಾಸ್ತ್ರಜ್ಞ ಮ್ಯಾಕ್ಸ ಮಲ್ಲೋವನ್ ಅವರನ್ನು ಭೇಟಿಯಾದಳು. ಅವರಿಬ್ಬರೂ ಪರಸ್ಪರ ಪ್ರೀತಿಯಲ್ಲಿ ಸಿಲುಕಿ ಮುಂದಿನ ಕೆಲವೇ ತಿಂಗಳುಗಳಲ್ಲಿ ವಿವಾಹವಾದರು. ಹೀಗೆ ಆರಂಭವಾದ ಅವರ ವೈವಾಹಿಕ ಬದುಕು ಅಗಾಥಾ ಅವರ ಮರಣದವರೆಗೆ.... ಸುಮಾರು 46 ವರ್ಷಗಳವರೆಗೆ ಅವರು ದಾಂಪತ್ಯ ಜೀವನ ನಡೆಸಿದರು.

ಅತ್ಯಂತ ಸುಖಕರ ದಾಂಪತ್ಯ ಜೀವನವನ್ನು ಮ್ಯಾಕ್ಸ್ ಕ್ರಿಸ್ಟಿಯೊಂದಿಗೆ ಹೊಂದಿದ್ದ ಆಕೆ ಪತಿಯ ಪ್ರೋತ್ಸಾಹದಿಂದ ಮತ್ತಷ್ಟು ಉತ್ತಮ ಕಾದಂಬರಿಗಳನ್ನು ರಚಿಸಿದಳು. ಆಕೆಯ ಕಾದಂಬರಿಗಳು



ಧಾರವಾಹಿಗಳ ರೂಪದಲ್ಲಿ ಇಂಗ್ಲೆಂಡ್ ಮತ್ತು ಯುನೈಟೆಡ್ ಸ್ಟೇಟ್ಸ್ ನ ನಿಯತಕಾಲಿಕಗಳಲ್ಲಿ ಪ್ರಕಟಗೊಳ್ಳುತ್ತಿದ್ದವು.

ಆಕೆಯ ಅತ್ಯಂತ ಪ್ರಮುಖ ಕೃತಿಗಳು.. ದ ಮಿಸ್ಟರಿಯಸ್ ಅಫೇರ್ ಅಟ್ ಸ್ಟೈಲ್ಸ್, ಹರ್ಕ್ಯೂಲ್ ಪೈ ರೋಟ್, ದ ಮರ್ಡರ್ ಆಫ್ ರೋಜರ್ ಅಕ್ರೊಯ್ಡ್, ದ ಮೌಸ್ ಟ್ರಾಪ್ ಎಂಬ ನಾಟಕ ಮುಂತಾದವು.

ಅದರಲ್ಲೂ ಆಕೆಯ ನಾಟಕಗಳು ಸುದೀರ್ಘಕಾಲ ಪ್ರದರ್ಶನಗೊಂಡ ದಾಖಲೆಗಳನ್ನು ಹೊಂದಿವೆ. ಲಂಡನ್ ನ ಅಂಬಾಸಿಡರ್ ಥಿಯೇಟರ್ ನಲ್ಲಿ ಆಕೆಯ ದ ಮೌಸ್ ಟ್ರಾ ಪ್ ಎಂಬ ನಾಟಕ 8862ಕ್ಕೂ ಹೆಚ್ಚು ಪ್ರದರ್ಶನಗಳನ್ನು ಕಂಡಿತು. ಇತ್ತೀಚೆಗೆ 2019ರಲ್ಲಿ ಕರೋನ ದಾಳಿ ಇಡುವ ಮುನ್ನ 28200 ಪ್ರದರ್ಶನಗಳನ್ನು ಈ ನಾಟಕ ಹೊಂದಿದೆ.

ಇದಲ್ಲದೆ ಆಕೆಯ ಹಲವಾರು ಕೃತಿಗಳು ಚಲನಚಿತ್ರಗಳಾಗಿ ರೂಪುಗೊಂಡಿವೆ. ಅಂಡ್ ಡರ್ ವರ್ ನನ್ , ಮರ್ಡರ್ ಆನ್ ದಿ ಓರಿಯಂಟ್ ಎಕ್ಸ್ ಪ್ರೆಸ್, ಮಿರರ್ ಕ್ರಾಕ್ಡ್ ಮುಂತಾದ ಚಲನಚಿತ್ರಗಳು ಆಕೆಯ ಕಾದಂಬರಿಗಳನ್ನು ಆಧರಿಸಿ ತಯಾರಿಸಿದ ಕಥೆಗಳು. ಜನಪ್ರಿಯತೆಯ ತುತ್ತ ತುದಿಯಲ್ಲಿದ್ದಾಗಲೂ ಕೂಡ ಆಕೆ ಅತ್ಯಂತ ಸಂಕೋಚ ಸ್ವಭಾವದ ವ್ಯಕ್ತಿಯಾಗಿದ್ದಳು.

1968ರಲ್ಲಿ ಆಕೆಯ ಪತಿ ಮ್ಯಾಕ್ಸ್ ಅವರಿಗೆ ಬ್ರಿಟನ್ನ ನ ಪ್ರತಿಷ್ಠಿತ ನೈಟ್ ಪದವಿ ದೊರೆಯಿತು. ಇದಾಗಿ ಮೂರು ವರ್ಷಗಳ ನಂತರ 1971ರಲ್ಲಿ ಅಘಾತ ಅವರನ್ನು ಬ್ರಿಟಿಷ್ ಸಾಮ್ರಾಜ್ಯದ ಡೇಂ ಕಮಾಂಡರ್ ಆಫ್ ದಿ ಆರ್ಡರ್ ಆಫ್ ಬ್ರಿಟಿಷ್ ಎಂಪೈರ್ ಎಂದು ಗೌರವ ಪ್ರಧಾನ ಮಾಡಲಾಯಿತು.

ಅಗಾಥ ಮೇರಿ ಕ್ಲಾರಿಸ್ಸಾ ಮಿಲ್ಲರ್ ಕ್ರಿಸ್ಟಿ ಮಲ್ಲೋವನ್ ಎಂಬ ಅತ್ಯಂತ ಉದ್ದದ ಹೆಸರಿನ ಆಗಾಥಾ ಕ್ರಿಸ್ಟಿ 1976ರ ಜನವರಿ 12ರಂದು ತಮ್ಮ 85ನೇ ವಯಸ್ಸಿನಲ್ಲಿ ನಿಧನರಾದರು. ಆಕೆಯ ಪುಸ್ತಕಗಳ ಎರಡು ಬಿಲಿಯನ್ ಗಿಂತ ಹೆಚ್ಚು ಪ್ರತಿಗಳು ಮಾರಾಟವಾಗಿವೆ. ಇತಿಹಾಸ ದಾಖಲಿಸಿದ ಅತ್ಯುತ್ತಮ ಪುಸ್ತಕಗಳ ಪಟ್ಟಿಯಲ್ಲಿ ಮೊದಲ ಹೆಸರು ಆಕೆಯ ಪುಸ್ತಕಗಳದ್ದೇ. ಬದುಕು ತಂದೊಡ್ಡುವ ಸವಾಲುಗಳನ್ನು ಎದುರಿಸಿ ಸಾಗಿದರೆ ಸಾಧನೆಯ ಬದುಕು ನಮ್ಮದಾಗಬಹುದು ಎಂಬುದಕ್ಕೆ ನಿದರ್ಶನವಾಗಿ ನಿಲ್ಲುತ್ತಾರೆ ಅಗಾಥ ಕ್ರಿಸ್ಟಿ.

# ಸುಭಾಷ್ ಚಂದ್ರ ಬೋಸ್ ಅಪ್ರತಿಮ ದೇಶಪ್ರೇಮಿ

### ಮುಖ್ಯ ಮಂತ್ರಿ ಸಿದ್ದರಾಮಯ್ಯ ಹೇಳಿಕೆ । ಬೋಸ್ ಜನ್ಮದಿನಾಚರಣೆ



**ಬೆಂಗಳೂರು:** ಸುಭಾಷ್ ಚಂದ್ರ ಬೋಸ್ ಅಪ್ರತಿಮ ದೇಶಪ್ರೇಮಿ ಹಾಗೂ ಸ್ವಾತಂತ್ರ್ಯ ಹೋರಾಟಗಾರರು ಎಂದು ಮುಖ್ಯ ಮಂತ್ರಿ ಸಿದ್ದರಾಮಯ್ಯ ತಿಳಿಸಿದರು. ಅವರು ಮಂಗಳವಾರ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ಜನ್ಮದಿನದ ಅಂಗವಾಗಿ ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿದ ನಂತರ ಮಾಧ್ಯಮದವ ರೊಂದಿಗೆ ಮಾತನಾಡಿದರು.

ಸುಭಾಷ್ ಚಂದ್ರ ಬೋಸ್ ಅವರ 127 ನೇ ಜಯಂತಿಯನ್ನು ಆಚರಿಸುತ್ತಿದ್ದು, ಇಂದು ಅವರ ಪ್ರತಿಮೆಗೆ ಮಾಲಾರ್ಪಣೆ ಮಾಡಿ ಸ್ಮರಿಸಿ, ಗೌರವಿಸಿದ್ದೇವೆ. ಕಾಂಗ್ರೆಸ್ ಅಧ್ಯಕ್ಷರಾಗಿ ಸ್ವಾತಂತ್ರ್ಯ ಹೋರಾಟದಲ್ಲಿ ಸಂಪೂರ್ಣವಾಗಿ ತೊಡಗಿಸಿ ಕೊಂಡಿದ್ದರು. ಗಾಂಧೀಜಿ ಹಾಗೂ ಸುಭಾಷ್ ಚಂದ್ರ ಬೋಸ್ ನಡುವೆ ಸ್ವಾತಂತ್ರ್ಯ ಹೋರಾಟದ ಹಾದಿಯ ಬಗ್ಗೆ ಭಿನ್ನಾಭಿಪ್ರಾಯ ಮೂಡಿತ್ತು. ಮಹಾತ್ಮ ಗಾಂಧೀಜಿ ಶಾಂತಿ, ಅಹಿಂಸೆ ಮೂಲಕ ಸ್ವಾತಂತ್ರ್ಯ ಗಳಿಸಬೇಕು ಎಂದರೆ, ಸುಭಾಷ್ ಚಂದ್ರ ಬೋಸ್ ಅವರಿಗೆ ಅದರ ತದ್ವಿರುದ್ಧವಾದ ನಿಲುವು ಇತ್ತು. ಬೇರೆ ವಿಚಾರಗಳಲ್ಲಿ ಗಾಂಧೀಜಿ ಯವರ ಬಗ್ಗೆ ಅಪಾರವಾದ ಗೌರವವಿತ್ತು. ಈ ವಿಚಾರದಲ್ಲಿ ಮಾತ್ರ ಆಲೋಚನೆಗಳಲ್ಲಿ ಭಿನ್ನಾಭಿಪ್ರಾಯ ಇತ್ತು. ಭಾರತೀಯ ರಾಷ್ಟ್ರೀಯ ಸೇನೆಯನ್ನು ಸ್ಥಾಪಿಸಿ ಅದರ ಮುಖ್ಯಸ್ಥರಾಗಿದ್ದರು. ಜಪಾನ್ ದೇಶದಲ್ಲಿ ಅವರು ವಿಮಾನ ದುರಂತದಲ್ಲಿ ಅವರು ಸಾವಿಗೀಡಾದರು. ಅಪ್ರತಿಮ ಸ್ವಾತಂತ್ರ್ಯ ಪ್ರೇಮಿ, ದೇಶಪ್ರೇಮಿಯಾಗಿದ್ದರು. ಸುಭಾಷ್ ಚಂದ್ರ ಬೋಸ್ ಅವರು ನಮಗೆಲ್ಲಾ ಆದರ್ಶ. ಅವರ ಆದರ್ಶಗಳನ್ನು ನಾವೆಲ್ಲರೂ ಅನುಸರಿಸುವುದೇ ಅವರಿಗೆ ಸಲ್ಲಿಸುವ ಗೌರವ. ಅವರ ತತ್ವಾದರ್ಶಗಳು ನಮಗೆ ದಾರಿದೀಪವಾಗಲಿ ಎಂದರು.

# ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಪಡೆಯಲು ಅರ್ಹ ಫಲಾನುಭವಿಗಳಿಂದ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ಕೊಪ್ಪಳ**
2023-24ನೇ ಸಾಲಿನಲ್ಲಿ ಜಿಲ್ಲಾ ವ್ಯಾಪ್ತಿಯ ದೈಹಿಕ ವಿಕಲಚೇತನರಿಗೆ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ನೀಡಲಾಗುತ್ತಿದ್ದು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ. ಫಲಾನುಭವಿಗಳು ಶೇ.75 ಮತ್ತು ಅದಕ್ಕಿಂತ ಹೆಚ್ಚಿನ ದೈಹಿಕ ವಿಕಲತೆ ಹೊಂದಿದ್ದು, ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಚಾಲನೆ ಮಾಡಲು ಸಾಮರ್ಥ್ಯ ಹೊಂದಿರದ ಹಾಗೂ ಕನಿಷ್ಠ ಒಂದು ಕೈ, ಒಂದು ಕಣ್ಣು ಸಾಧೀನದಲ್ಲಿದ್ದು ಹಾಗೂ ಬ್ಯಾಟರಿಚಾಲಿತ ವ್ಹೀಲ್ ಚೇರ್ ಚಲಾಯಿಸಲು ಇತರೇ ಎಲ್ಲಾ ರೀತಿಯಲ್ಲಿ ಸದೃಢವಾಗಿರುವ ವಿಕಲಚೇತನರಾಗಿರಬೇಕು.

ದೈಹಿಕ ವಿಕಲಚೇತನರಿಗೆ ಜೀವಿತ ಕಾಲದಲ್ಲಿ ಒಂದು ಬಾರಿ ಇಲಾಖೆಯಿಂದ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ನೀಡಲಾಗುತ್ತದೆ. ಫಲಾನು ಭವಿಯ ಕುಟುಂಬದ ವಾರ್ಷಿಕ ವರಮಾನ ರೂ.2 ಲಕ್ಷದ ಒಳಗಿರಬೇಕು. ಸರ್ಕಾರದಿಂದ ಯಂತ್ರಚಾಲಿತ ದ್ವಿಚಕ್ರ ವಾಹನವನ್ನು ಪಡೆದಿರಬಾರದು. ಇತರೆ ಇಲಾಖೆಗಳಿಂದ ಅಥವಾ ಸಂಘ ಸಂಸ್ಥೆಗಳಿಂದ ಬ್ಯಾಟರಿ ಚಾಲಿತ ವ್ಹೀಲ್ ಚೇರ್‌ಗಳನ್ನು ಪಡೆದಿರಬಾರದು.

ಅರ್ಹ ಫಲಾನುಭವಿಗಳು ಯು.ಡಿ.ಐ.ಡಿ ಕಾರ್ಡ್, ಸಕ್ಷಮ ಪ್ರಾಧಿಕಾರದಿಂದ ಪಡೆದ ಜಾತಿ ಮತ್ತು ಆದಾಯ ಪ್ರಮಾಣ ಪತ್ರ, ವಾಸಸ್ಥಳ ಪ್ರಮಾಣ ಪತ್ರ (ಕನಿಷ್ಠ 10 ವರ್ಷ), 2 ಭಾವಚಿತ್ರಗಳು, ಈ ಹಿಂದೆ ಇತರೆ ಇಲಾಖೆಗಳಲ್ಲಿ ಅಥವಾ ಸಂಘ ಸಂಸ್ಥೆಗಳಿಂದ ಬ್ಯಾಟರಿ ಚಾಲಿತ ವ್ಹೀಲ್ ಚೇರ್ ಹಾಗೂ ಯಂತ್ರಚಾಲಿತ ದ್ವಿಚಕ್ರ ವಾಹನ ಪಡೆದಿಲ್ಲವೆಂದು ರೂ.50 ಛಾಪಾ ಕಾಗದ ನೋಟರಿ ದೃಢೀಕರಣ ಪ್ರಾಮಾಣ ಪತ್ರ, ಆಧಾರ್ ಕಾರ್ಡ್, ಮತದಾರರ ಗುರುತಿನ ಚೀಟಿ, ಬಿಪಿಎಲ್ ಕಾರ್ಡ್‌ಗಳೊಂದಿಗೆ ಜನವರಿ 25 ರಿಂದ ಫೆಬ್ರವರಿ 15 ರೊಳಗಾಗಿ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳು, ಕೊಪ್ಪಳ ಇವರ ಕಛೇರಿಗೆ ಸಲ್ಲಿಸಬೇಕು. ಹೆಚ್ಚಿನ ಮಾಹಿತಿಗಾಗಿ ಆಯಾ ತಾಲೂಕಿನ ತಾಲೂಕು ಪಂಚಾಯತಿಯಲ್ಲಿ ಕಾರ್ಯ ನಿರ್ವಹಿಸುತ್ತಿರುವ ಎಂ.ಆರ್. ಡಬ್ಲ್ಯೂಗಳನ್ನು, ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ಯು.ಆರ್.ಡಬ್ಲ್ಯೂಗಳನ್ನು ಹಾಗೂ ಗ್ರಾಮ ಪಂಚಾಯತಿಗಳಲ್ಲಿ ಕಾರ್ಯನಿರ್ವಹಿಸುತ್ತಿರುವ ವಿ.ಆರ್.ಡಬ್ಲ್ಯೂಗಳನ್ನು ಸಂಪರ್ಕಿಸಬಹುದು ಎಂದು ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿ ಶ್ರೀದೇವಿ ತಿಳಿಸಿದ್ದಾರೆ.



# ಅಂತಿಮ ಮತದಾರರ ಪಟ್ಟಿ ಪ್ರಕಟ ಹೆಸರು ಪರಿಶೀಲನೆಗೆ ಅವಕಾಶ

**ಹಂಪಿ ಟೈಮ್ಸ್ ಹೊಸಪೇಟೆ**

ಅರ್ಹ ಮತದಾರರ ಸೇರ್ಪಡೆ ಮತ್ತು ಮತದಾರ ಪಟ್ಟಿ ಸಂಕ್ಷಿಪ್ತ ಪರಿಷ್ಕರಣೆ-2024ಗೆ ಸಂಬಂಧಿಸಿದಂತೆ ಜ.22ರಂದು ಅಂತಿಮ ಮತದಾರ ಪಟ್ಟಿಯನ್ನು ಜಿಲ್ಲೆಯ 1234 ಮತಗಟ್ಟೆ ಕೇಂದ್ರಗಳಲ್ಲಿ ಪ್ರಚುರಪಡಿಸಲಾಗಿದೆ. ಮುಂದುವರೆದು ಅಂತಿಮ ಮತದಾರ ಪಟ್ಟಿಯನ್ನು ಜಿಲ್ಲಾ ವೆಬ್‌ಸೈಟನಲ್ಲಿ (vijayanagar.nic.in) ನಲ್ಲಿ ಹಾಗೂ ಆಯೋಗದ ವೋಟರ್ ಹೆಲ್ಪಲೈನ್ ಆ್ಯಪ್‌ನಲ್ಲಿನಲ್ಲಿ ಅಪಡೇಟ್ ಮಾಡಲಾಗಿದ್ದು ಮತದಾರರು ತಮ್ಮ ಹೆಸರನ್ನು ಪರಿಶೀಲನೆ ಮಾಡಿಕೊಳ್ಳಬೇಕು ಎಂದು ಜಿಲ್ಲಾ ಚುನಾವಣಾಧಿಕಾರಿಗಳು ಆಗಿರುವ ಜಿಲ್ಲಾಧಿಕಾರಿಗಳಾದ ಎಂ.ಎಸ್.ದಿವಾಕರ ಅವರು ಹೇಳಿದ್ದಾರೆ.

ಚುನಾವಣಾ ಆಯೋಗದ ವೇಳಾಪಟ್ಟಿಯಂತೆ ಜನವರಿ 22ರಂದು ವಿಜಯನಗರ ಜಿಲ್ಲೆಯ 5 ವಿಧಾನಸಭಾ ಕ್ಷೇತ್ರಗಳಾದ 88-ಹಡಗಲಿ, 89-ಹೆಚ್.ಬಿ.ಹಳ್ಳಿ, 90-ವಿಜಯನಗರ, 96-ಕೂಡ್ಲಗಿ, 104-ಹರಪನಹಳ್ಳಿಯ ಅರ್ಹತಾ ದಿ:01.01.2024ಕ್ಕೆ ಅನ್ವಯವಾಗುವಂತೆ ಮತದಾರ ಪಟ್ಟಿ ಪರಷ್ಕರಣೆ ಅಂತಿಮ ಮತದಾರ ಪಟ್ಟಿಯನ್ನು ಜಿಲ್ಲೆಯ ಎಲ್ಲಾ ಮತದಾರ ನೋಂದಣಾಧಿಕಾರಿ ಕಚೇರಿ, (ಸಹಾಯಕ ಆಯುಕ್ತರು), ಸಹಾಯಕ ಮತದಾರರ ನೋಂದಣಾಧಿಕಾರಿ ಕಚೇರಿ (ತಹಶೀಲ್ ಕಚೇರಿ) ಹಾಗೂ ತಾಲ್ಲೂಕು ಪಂಚಾಯತ್, ನಗರಸಭೆ, ಪುರಸಭೆ ಮತ್ತು ಜಿಲ್ಲೆಯ ಒಟ್ಟು 1234 ಮತಗಟ್ಟೆ ಕೇಂದ್ರಗಳಲ್ಲಿ ಮತಗಟ್ಟೆ ಅಧಿಕಾರಿಗಳು ಅಂತಿಮ ಮತದಾರ ಪಟ್ಟಿಯನ್ನು ಪ್ರಚುರಪಡಿಸಲಾಗಿರುತ್ತದೆ.

ಪ್ರತಿ ವಿಧಾನಸಭಾ ಕ್ಷೇತ್ರದಲ್ಲಿ ಮತಗಟ್ಟೆವಾರು ಬಿಎಲ್‌ಇ ಅವರ ಮುಖಾಂತರ ಮತದಾರರ ಹೆಸರು ನೋಂದಣೆಯಾಗಿರುವ ಕುರಿತು ಹಾಗೂ ಯಾವುದೇ ತಪ್ಪುಗಳಿದ್ದರೆ ನೇರವಾಗಿ ಮತದಾರರ ನೋಂದಣಾಧಿಕಾರಿ ಕಚೇರಿಗೆ ಮಾಹಿತಿ ನೀಡಲು ವಿವಿಧ ರಾಜಕೀಯ ಪಕ್ಷಗಳ ಮುಖಂಡರಿಗೆ ತಿಳಿಸಲಾಗಿದೆ.

ಅಂತಿಮ ಮತದಾರ ಪಟ್ಟಿ ಪ್ರಕಟಣೆ ನಂತರ ಸಹ ಯಾವುದೇ ಮತದಾರರ ನೋಂದಣೆ ಮಾಡಲು ಸಾಧ್ಯವಾಗದೇ ಇದ್ದ ಪಕ್ಷದಲ್ಲಿ ಆಯೋಗದ ವೆಬ್‌ಸೈಟನಲ್ಲಿ ಹಾಗೂ ವೋಟರ್ ಹೆಲ್ಪಲೈನ್‌ದಲ್ಲಿ ನಿರಂತರ ನೋಂದಣೆ ಮಾಡಲು ಅವಕಾಶವಿರುತ್ತದೆ. ಅರ್ಹ ಮತದಾರರು ತಮ್ಮ ಹೆಸರು ಮತದಾರರ ಪಟ್ಟಿಯಲ್ಲಿ ಸೇರ್ಪಡೆ ಮಾಡಿಕೊಳ್ಳಬಹುದಾಗಿದೆ ಎಂದು ಜಿಲ್ಲಾಧಿಕಾರಿಗಳು ತಿಳಿಸಿದ್ದಾರೆ

# ಜ.28, ಫಲ-ಪುಷ್ಪ ಪ್ರದರ್ಶನ ಕಾರ್ಯಕ್ರಮ

**ಹಂಪಿ ಟೈಮ್ಸ್ ರಾಯಚೂರು**

2023-24 ನೇ ಸಾಲಿನ ಗಣರಾಜೋತ್ಸವ ಅಂಗವಾಗಿ ತೋಟಗಾರಿಕೆ ಇಲಾಖೆ ಯಿಂದ ಜ.26 ರಿಂದ ಜ.28 ರವರೆಗೆ ತೋಟಗಾರಿಕೆ ಉಪ ನಿರ್ದೇಶಕರು (ಜಿ.ಪಂ) ಕಛೇರಿ, ರಾಯಚೂರು ಆವರಣದಲ್ಲಿ ಫಲ-ಪುಷ್ಪ ಪ್ರದರ್ಶನ ಆಯೋಜಿಸಲಾಗಿದ್ದು. ತೋಟಗಾರಿಕೆ ಫಲ-ಪುಷ್ಪ ಪ್ರದರ್ಶನದಲ್ಲಿ ಈ ಕೆಳಕಂಡ ವಿಶೇಷ ಆಕರ್ಷಣೆಗಳಿಂದ ಕೂಡಿರುತ್ತದೆ ಎಂದು ಜಿಲ್ಲಾ ತೋಟಗಾರಿಕೆಯ ಉಪ ನಿರ್ದೇಶಕರು ತಿಳಿಸಿದ್ದಾರೆ.

**ಫಲ-ಪುಷ್ಪ ಪ್ರದರ್ಶಗಳು:** ಪುಷ್ಪಗಳಿಂದ ತಯಾರಿಸಿದ ಚಂದ್ರಯಾನ(ರಾಕೆಟ ಮತ್ತು ರೋವರ್), ಪುಷ್ಪಗಳಿಂದ ಅಲಂಕೃತ ಮೂರ್ತಿಗಳ ಪ್ರದರ್ಶನ (ಬಿದಿರಿನ ಗಣಪ, ಆನೆ, ನವಿಲು ಮತ್ತು ಶಿವಲಿಂಗ, ತರಕಾರಿ ಕೆತ್ತನೆಗಳು, ರೈತರು ಬೆಳೆದ ತರಕಾರಿ ಮತ್ತು ಹಣ್ಣು ಗಳ ಪ್ರದರ್ಶನ, ವಿವಿದ ವಿನ್ಯಾಸಗಳಲ್ಲಿ ವಾರ್ಷಿಕ ಹೂ ಕುಂಡಗಳ ಜೋಡಣೆ ಈ ಕಾರ್ಯಕ್ರಮಕ್ಕೆ ಹೆಚ್ಚಿನ ಸಂಖ್ಯೆಯೆಯಲ್ಲಿ ಜನರು ಮತ್ತು ವಿದ್ಯಾರ್ಥಿಗಳು ಭಾಗವಹಿಸಿ ಪ್ರಯೋಜನೆ ಪಡೆಯವಂತೆ ಜಿಲ್ಲಾ ತೋಟಗಾರಿಕೆಯ ಉಪ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ



# ಮಹಿಳೆಯರು ಸಬಲರಾಗಿ ಮುನ್ನಡೆಯಿರಿ

## ಸಿಇಒ ರಾಹುಲ್ ಶರಣಪ್ಪ ಸಂಕನೂರ ಹೇಳಿಕೆ | ಮಹಿಳೆಯರಿಗೆ ಸರ್ಕಾರದ ಯೋಜನೆಗಳು ಜಾರಿಯಾಗುತ್ತಿವೆ

**ಹಂಪಿ ಟೈಮ್ಸ್ ಬಳ್ಳಾರಿ**

ಮಹಿಳೆಯರಿಗೆ ಎಲ್ಲಾ ಕ್ಷೇತ್ರಗಳಲ್ಲಿ ಸಮಾನತೆ ಇದ್ದು, ಸರ್ಕಾರದ ವಿವಿಧ ಯೋಜನೆಗಳು ಜಾರಿಯಾಗುತ್ತಿವೆ. ಅವುಗಳನ್ನು ಬಳಸಿಕೊಂಡು ಸಬಲರಾಗಿ ಮುನ್ನಡೆಯಬೇಕು ಎಂದು ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ಶರಣಪ್ಪ ಸಂಕನೂರ ಅವರು ಕರೆ ನೀಡಿದರು.

ಜಿಲ್ಲಾ ಪಂಚಾಯತ್ ಸಹಯೋಗದೊಂದಿಗೆ ಎನ್‌ಆರ್‌ಎಲ್‌ಎಂ ಯೋಜನೆಯಡಿ ಎಸ್‌ಎಚ್‌ಜಿ ಮಹಿಳೆಯರಿಗೆ ಕೆನರಾ ಬ್ಯಾಂಕ್ ಗ್ರಾಮೀಣ ಸ್ವಉದ್ಯೋಗ ತರಬೇತಿ ಸಂಸ್ಥೆಯ ಆವರಣದಲ್ಲಿ ಮಂಗಳವಾರ ಹಮ್ಮಿಕೊಂಡಿದ್ದ ಘನ ಮತ್ತು ದ್ರವ ತ್ಯಾಜ್ಯ ಘಟಕಗಳ ನಾಲ್ಕು ಚಕ್ರದ ವಾಹನ ಚಾಲನಾ ತರಬೇತಿ ಸಮಾರಂಭ ಉದ್ಘಾಟಿಸಿ ಅವರು ಮಾತನಾಡಿದರು.

ಗ್ರಾಮ ಪಂಚಾಯತ್ ಮಟ್ಟದಲ್ಲಿ ಘನ ಮತ್ತು ದ್ರವತ್ಯಾಜ್ಯವಾಹನಕ್ಕೆವಾಹನಚಾಲಕಿಯರನ್ನಾಗಿ ಸ್ವ-ಸಹಾಯ ಗುಂಪಿನ ಮಹಿಳೆಯರನ್ನು ಆಯ್ಕೆ ಮಾಡಲಾಗಿದ್ದು, ಮಹಿಳೆಯರು ಧೈರ್ಯದಿಂದ ವಾಹನ ಚಲಾವಣೆ ಮಾಡುವಲ್ಲಿ ಆಸಕ್ತಿ ವಹಿಸಿ ಕಲಿಯಬೇಕು. ಉತ್ತಮ ತರಬೇತಿ ಪಡೆದುಕೊಂಡು ಸ್ವಾವಲಂಬಿ ಜೀವನ ನಡೆಸಬೇಕು ಎಂದು ಹೇಳಿದರು.



ಜಿಲ್ಲಾ ಪಂಚಾಯತ್ ಯೋಜನಾ ನಿರ್ದೇಶಕ ಪ್ರಮೋದ್.ಪಿ., ಅವರು ಮಾತನಾಡಿ, ಗ್ರಾಮೀಣ ಭಾಗದಲ್ಲಿ ಸ್ವಚ್ಚತಾ ಕಾರ್ಯಕ್ರಮದಲ್ಲಿ ಮಹಿಳೆಯರ ಪಾತ್ರ ಬಹು ಮುಖ್ಯವಾಗಿದೆ. ಉತ್ತಮ ತರಬೇತಿ ಪಡೆದುಕೊಳ್ಳಬೇಕು. ಬಳ್ಳಾರಿ ಜಿಲ್ಲೆಯಲ್ಲಿ ಚಾಲನಾ ತರಬೇತಿ ಪಡೆಯದೆ ಇರುವ ಮಹಿಳೆಯರಿಗೆ ತರಬೇತಿ ಆಯೋಜಿಸಲಾಗಿದೆ ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಕೆನರಾ ಬ್ಯಾಂಕ್ ಪ್ರಾದೇಶಿಕ ಕಚೇರಿಯ ಏಜಿಎಂ ಹಾಗೂ ಡಿ.ವಿ.ಪಿ.ಆರ್ ಮುರಳೀಕೃಷ್ಣ, ಖಾಗ್ರಾ ಉಪ ನಿರ್ದೇಶಕ ಸಾದಿಕ್ ಉಲ್ಲಾ, ತಾಪಂ ಇಒ ಮಡಿಗಿನ ಬಸಪ್ಪ, ಕೆನರಾ ಬ್ಯಾಂಕ್ ಪ್ರಾದೇಶಿಕ ಕಚೇರಿಯ ಹಿರಿಯ ವ್ಯವಸ್ಥಾಪಕ ಶರಣಬಸವ ರೆಡ್ಡಿ, ಕೆನರಾ ಬ್ಯಾಂಕ್ ಗ್ರಾಮೀಣ ಸ್ವ-ಉದ್ಯೋಗ ತರಬೇತಿ ಸಂಸ್ಥೆಯ ನಿರ್ದೇಶಕ ರಾಜೇಸಾಬ್ ಎರಿಮನಿ, ಜಿಲ್ಲಾ ಕಾರ್ಯಕ್ರಮ ವ್ಯವಸ್ಥಾಪಕ ರಾಜೇಂದ್ರ, ಜಿಲ್ಲಾ ವ್ಯವಸ್ಥಾಪಕ ವಿಜಯ ಕುಮಾರ, ಉಪನ್ಯಾಸಕ ಜಡೇಶ ಸೇರಿದಂತೆ ಸಿದ್ದಲಿಂಗಮ್ಮ, ,ಸಂತೋಷ ಕುಮಾರ ಉಪಸ್ಥಿತರಿದ್ದರು.

ತರಬೇತಿಯಲ್ಲಿ 30 ಜನ ಶಿಬಿರಾರ್ಥಿಗಳು ಭಾಗವಹಿಸಿದ್ದರು.

# ಬಿ.ಟಿ ಹತ್ತಿ ಬೆಳೆಗಾರರಿಗೆ ಕೃಷಿ ಇಲಾಖೆಯಿಂದ ಸಲಹೆ

**ಹಂಪಿ ಟೈಮ್ಸ್ ಕೊಪ್ಪಳ**



ಬಿ.ಟಿ. ಹತ್ತಿಯ ಬಿತ್ತನೆ ಕಾಲಾವಧಿಯು ಜೂನ್ ಮೊದಲ ವಾರದಿಂದ ಜುಲೈ ಮೂರನೇ ವಾರದವರೆಗೆ ಇದ್ದು, ಈ ಕಾಲಾವಧಿಯ ಶಿಫಾರಸ್ಸನ್ನು ಅನುಸರಿಸುವಂತೆ ರಾಯಚೂರು ವಿಶ್ವ ವಿದ್ಯಾನಿಲಯದ ಕೃಷಿ ವಿಜ್ಞಾನಿಗಳು ಸೂಚಿಸಿದ್ದಾರೆ.

ಹತ್ತಿ ಬೆಳೆಯುವ ರೈತರಿಗಾಗಿ ವಿವಿಧ ಬೀಜದ ಕಂಪನಿಗಳು ಅನೇಕ ಬಿ.ಟಿ. ಹತ್ತಿ ತಳಿಗಳನ್ನು ಮಾರಾಟಕ್ಕೆ ದಾಸ್ತಾನು ಇಟ್ಟಿರುತ್ತಾರೆ. ಈ ಎಲ್ಲಾ ತಳಿಗಳು ಬಿ.ಟಿ. ತಳಿಗಳಾಗಿದ್ದು, ಅವುಗಳಲ್ಲಿ ಹೆಚ್ಚಿನ ವ್ಯತ್ಯಾಸವಿರುವುದಿಲ್ಲ. ರೈತರು ಯಾವುದೇ ಒಂದು ಕಂಪನಿಯ ಯಾವುದಾದರೊಂದು ತಳಿಯು ಬೇಕೆಂದಲ್ಲಿ ಮಾರುಕಟ್ಟೆಯಲ್ಲಿ ಅಂತಹ ತಳಿಯ ಕೊರತೆಯುಂಟಾಗಿ, ಅಧಿಕ ಬೆಲೆಗೆ ಮಾರಾಟವಾಗುವುದು ಹಾಗೂ ಕಳಪೆ ಬೀಜವನ್ನು ಸರಬರಾಜು ಮಾಡುವುದು ಇತ್ಯಾದಿ ಅವ್ಯವಹಾರ ಪ್ರಾರಂಭವಾಗಿ, ರೈತರಿಗೆ ಅನ್ಯಾಯ ವಾಗುವುದೆಂಬುದನ್ನು ಮನಗಾಣಬೇಕು.

ಕಾರಣ ಹತ್ತಿ ಬೆಳೆಗಾರರು ಮಾರುಕಟ್ಟೆಯಲ್ಲಿರುವ ವಿವಿಧ ತಳಿಗಳಲ್ಲಿ ಲಭ್ಯತೆಯ ಮೇಲೆ ಆಯ್ಕೆ ಮಾಡಿಕೊಳ್ಳಬೇಕು. ಆದರೆ ಕೊಳ್ಳುವ ಮುನ್ನ ಪ್ಯಾಕೇಟ್‌ನ್ನು ಪರಿಶೀಲಿಸಿ, ತಯಾರಕರ ಕಂಪನಿಯ ಪೂರ್ಣ ಹೆಸರು ಹಾಗೂ ವಿಳಾಸ ಸರಿಯಿರುವುದನ್ನು ಹಾಗೂ ಅದರೊಂದಿಗೆ ನಿಜ ಚೀಟಿ ಪತ್ರ ಇರುವುದನ್ನು ಖಾತ್ರಿ ಪಡಿಸಿಕೊಳ್ಳಬೇಕು. ಬಿತ್ತನೆ ಬೀಜವನ್ನು ಅಧಿಕೃತ ಪರವಾನಿಗೆ ಹೊಂದಿರುವವರಿಂದ ಕೊಂಡುಕೊಳ್ಳಬೇಕು ಹಾಗೂ ಮಾರಾಟಗಾರರಿಂದ ಕಡ್ಡಾಯವಾಗಿ ತಪ್ಪದೇ ರಸೀದಿಯನ್ನು ಕೇಳಿ ಪಡೆಯಬೇಕು. ಆ ತಳಿಯ ಬೇಸಾಯ ಪದ್ಧತಿಯ ಬಗ್ಗೆ ಕರಪತ್ರವನ್ನು ಪಡೆಯಬೇಕು. ಬಿತ್ತನೆ ಮಾಡಿದ ನಂತರ ಬೆಳೆ ಕಟಾವು ಆಗುವವರೆಗೆ ಬೀಜದ ಚೀಲ, ಅಲ್ಪ ಪ್ರಮಾಣದ ಬೀಜ, ರಸೀದಿ ಹಾಗೂ ಕರಪತ್ರವನ್ನು ಕಾಯ್ದಿರಿಸಿಕೊಳ್ಳಬೇಕು. ಬೆಳೆಯಲ್ಲಿ

ಸಮಸ್ಯೆ ಯುಂಟಾದಾಗ ಇವುಗಳು ಪ್ರಯೋಜನಕ್ಕೆ ಬರುತ್ತವೆ.

ಪ್ರತಿ ಬಿ.ಟಿ. ಹತ್ತಿಯ ಪ್ಯಾಕೇಟ್ ಜೊತೆ 125 ಗ್ರಾಂ. ಬಿ.ಟಿ. ಯೇತರ (ರೆಫ್ಯೂಜಿ) ಬೀಜಗಳನ್ನು ನೀಡುತ್ತಿದ್ದು, ರೈತರು ತಮ್ಮ ಹೊಲದ ಸುತ್ತಲೂ 4 ಸಾಲಿನಲ್ಲಿ ಈ ಬೀಜಗಳನ್ನು ಖಡ್ಡಾಯವಾಗಿ ಬಿತ್ತನೆ ಮಾಡಬೇಕು. ಇದರಿಂದ ಕಾಯಿಕೊರಕ ಹುಳುವಿನಲ್ಲಿ ಬಿ.ಟಿ. ನಿರೋಧಕ ಶಕ್ತಿಯನ್ನು ತಡೆಗಟ್ಟಲು ಸಹಕಾರಿಯಾಗುತ್ತದೆ ಹಾಗೂ ಕಾಯಿಕೊರಕದ ಬಾಧೆಯನ್ನು ಗುರುತಿಸಲು ಅನುಕೂಲವಾಗುತ್ತದೆ. ಕೆಲವೊಂದು ರೈತರು ಬಿ.ಟಿ. ಯೇತರ ಬೀಜವನ್ನು ಹುಸಿ ಗುಣಿಗಳಲ್ಲಿ ಬಳಸುತ್ತಿರುವುದು ಕಂಡು ಬರುತ್ತದೆ. ಆದರೆ ಹುಸಿಗುಣಿಗಳಿಗಾಗಿ ಬಳಸದೇ ಮೇಲೆ ತಿಳಿಸಿದಂತೆ ಅನುಸರಿಸಲು ರೈತರಿಗೆ ಕೋರಿದೆ.

ಬಿತ್ತನೆ ಬೀಜಕ್ಕಾಗಿ ಹತ್ತಿ ಬೆಳೆಯುವ ರೈತರು ಕಡ್ಡಾಯವಾಗಿ ಕಂಪನಿಯೊಂದಿಗೆ ಅಥವಾ ಸೀಡ್ ಆರ್ಗನೈಸರ್ ಇವರೊಂದಿಗೆ ಒಡಂಬಡಿಕೆ ಮಾಡಿಕೊಂಡಿರಬೇಕು. ಹೆಚ್ಚಿನ ಮಾಹಿತಿಗಾಗಿ ಹಾಗೂ ಈ ಬಗ್ಗೆ ಯಾವುದೇ ದೂರುಗಳಿದ್ದಲ್ಲಿ ತಾಲ್ಲೂಕಿನ ಸಹಾಯಕ ಕೃಷಿ ನಿರ್ದೇಶಕರನ್ನು ಸಂಪರ್ಕಿಸಬಹುದು ಎಂದು ಜಂಟಿ ಕೃಷಿ ನಿರ್ದೇಶಕರು ತಿಳಿಸಿದ್ದಾರೆ.

# ಶಿಶಿಕ್ಷು ತರಬೇತಿಗೆ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ರಾಯಚೂರು**


ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮ, ರಾಯಚೂರು ವಿಭಾಗದಲ್ಲಿ ಖಾಲಿ ಇರುವ ಆಟೋ ಮೆಕ್ಯಾನಿಕ್, ಆಟೋ ವೆಲ್ಡರ್, ಆಟೋ ಪೆಂಟರ್, ಆಟೋ ಮಷನಿಷ್ಟ್ ತರಬೇತಿ ಶಿಶಿಕ್ಷುಗಳಾಗಿ ಕಾರ್ಯ ನಿರ್ವಹಿಸಲು (ಐ.ಟಿ.ಐ ನಲ್ಲಿತೇರ್ಗಡೆ ಹೊಂದಿದ) ಆಸಕ್ತಿವುಳ್ಳ ಅರ್ಹ ಅಭ್ಯರ್ಥಿಗಳು ಅರ್ಜಿ ಸಲ್ಲಿಸಬಹುದೆಂದು ಕಲ್ಯಾಣ ಕರ್ನಾಟಕ ರಸ್ತೆ ಸಾರಿಗೆ ನಿಗಮದ ವಿಭಾಗೀಯ ನಿಯಂತ್ರಣಾಧಿಕಾರಿ ತಿಳಿಸಿದ್ದಾರೆ.

ಶಿಶಿಕ್ಷು ತರಬೇತಿಗೆ ಆಯ್ಕೆ ಮಾಡಿಕೊಳ್ಳುವ ಸಲುವಾಗಿ ಆನ್ ಲೈನ್‌ನಲ್ಲಿ ಮೂಲ ದಾಖಲಾತಿಗಳೊಂದಿಗೆ ಜ.23 ರಿಂದ ಜ.24ರವರೆಗೆ ( ಭಾನುವಾರ ಮತ್ತು ರಜಾ ದಿನಗಳು ಹೊರತುಪಡಿಸಿ) ಯಾವುದೇ ದಿನಾಂಕದಂದು ಬೆಳಿಗ್ಗೆ 10:00 ಗಂಟೆಯಿಂದ ಸಂಜೆ 4:30ರವರೆಗೆ ನೇರ ಸಂದರ್ಶನ ( Walk in interview ಹಾಗೂ ಹೆಚ್ಚಿನ ಮಾಹಿತಿಗಾಗಿ ನಿಗಮದ ವೆಬ್ ಸೈಟ್ www.apprenticeshipindia.org ಗೆ ಭೇಟಿ ನೀಡಿ ಹಾಗೆ ವಿಭಾಗೀಯ ಕಛೇರಿ, ಕ.ಕ.ರ.ಸಾ ನಿಗಮ, ಯರಗೇರಾರಸ್ತೆ, ರಾಯಚೂರು ಹಾಜರಾಗುವಂತೆ ಕರ್ನಾಟಕ ರಸ್ತೆ ಸಾರಿಗೆ ವಿಭಾಗೀಯ ನಿಯಂತ್ರಣಾಧಿಕಾರಿತಿಳಿಸಿದ್ದಾರೆ.

14 ಭಾಷೆಗಳಲ್ಲಿ
ಹಂಪಿ ಟೈಮ್ಸ್ ವೆಬ್‌ನ್ಯೂಸ್‌ಗೆ
ಭೇಟಿ ನೀಡಿ, ನಿಮ್ಮ ಮಾತೃಭಾಷೆಯಲ್ಲಿ ಸುದ್ದಿ, ಲೇಖನ ಓದಿರಿ...
www.hampitimes.com

## ಕವಿ ಮನಸು

### ಆನಂದ ಬಾಷ್ಪ..



ದೇವ ರಘಪತಿ ರಾಮಚಂದ್ರನೆ
ನೋವು ಕಳೆಯಿತು ಕಂಡು ನಿನ್ನನು
ಭಾವವುಕ್ಕಿದೆ ತಾಳಲಾರದೆ ಬಂದ ಕಣ್ಣೀರು
ಕಾವ ದೇವನೆ ನಿನ್ನ ಜನ್ಮದ
ತಾವಲೀದಿನ ಕಾಣಲೆನ್ನುತ
ಜಾವದಲ್ಲಿಯೆ ಬಂದು ಕುಳಿತೆನು ಬಿಗಿದು
ನನ್ನುಸಿರು

ಕನ್ನ ಕೊರೆಯಲು ಬಂದರನ್ನರು
ತನ್ನದಲ್ಲದ ಜಾಗ ಹಿಡಿದರು
ನಿನ್ನ ಮಂದಿರ ಕೆಡವಿ ಬಿಟ್ಟರು ತುಚ್ಛ
ಮನಸಿನೊಳು
ಎನ್ನ ಮನದಲಿ ಸತತ ಸಂಕಟ
ಚೆನ್ನ ರಾಮಗೆ ಸಿಗದೆ ದೇಗುಲ
ನಿನ್ನ ಮಂದಿರ ಮರಳಿ ಕಟ್ಟಲು ಬಂದ
ತೊಡಕುಗಳು

ದೂಡಲೆಂತದು ಮನದ ದುಗುಡವ
ಬಾಡಿ ಮುದುಡಿದ ಮನದಲಿದ್ದೆನು
ಮಾಡಲೇನನು ಮಾಡಿ ಬಿಟ್ಟಿಹೆ ನನ್ನ
ಚಿರಂಜೀವಿ
ಕಾಡಿ ಸಂಕಟ ಸತತ ನನ್ನನು
ನೋಡುತಿಲ್ಲಿನ ಕೆಲವು ಮನುಜರ
ಕೂಡಿ ಬಾಳದೆ ನಿನ್ನ ಮರೆತಿಹ ಹಲವು
ನರ ಜೀವಿ

ಇಂದು ಸಾರ್ಥಕವಾಯ್ತು ಬಾಳಿದು
ಬಂದು ನೋಡಲು ನಿನ್ನ ಚರಣವ
ಕುಂದು ಕಾಣದ ತರದೆ ನಿರ್ಮಿತ ಭವ್ಯ
ಮಂದಿರವು
ಬಂದ ಭಕ್ತರ ಮೊಗದಿ ಸಂತಸ
ನಿಂದು ನೋಡಲು ಹರ್ಷವೆನಿಸಿತು
ಚಂದದಿಂದಲಿ ನೋಡಿ ಪುಳಕಿತಗೊಂಡಿತೀ
ಮನವು॥

– ಪೆರ್ಮುಖ ಸುಬ್ರಹ್ಮಣ್ಯ ಭಟ್

## ತುಂಗಭದ್ರಾ ನೀರಿನ ಮಟ್ಟ



| ಮಂಗಳವಾರ : 23-01-2024 | |
|---|---|
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1588.81 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 359 ಕ್ಯುಸೆಕ್ |
| ಇಂದಿನ ಸಾಮರ್ಥ್ಯ | 10.066 ಟಿಎಂಸಿ |
| ಗರಿಷ್ಠ ಸಾಮರ್ಥ್ಯ | 105.788 ಟಿಎಂಸಿ |
| **ಕಳೆದ ವರ್ಷ ಇದೇ ದಿನ** | |
| ಗರಿಷ್ಠ ಮಟ್ಟ | 1633 ಅಡಿ |
| ಇಂದಿನ ಮಟ್ಟ | 1618.74 ಅಡಿ |
| ಒಳ ಹರಿವು | 00 ಕ್ಯುಸೆಕ್ |
| ಹೊರ ಹರಿವು | 8738 ಕ್ಯುಸೆಕ್ |
| ಸಾಮರ್ಥ್ಯ | 57.866 ಟಿಎಂಸಿ |

### ಓದುಗರ ಗಮನಕ್ಕೆ

ಪತ್ರಿಕೆಯಲ್ಲಿ ಪ್ರಕಟವಾಗುವ ಜಾಹೀರಾತುಗಳು ವಿಶ್ವಾಸಪೂರ್ಣವೇ ಆದರೂ ಅವುಗಳಲ್ಲಿನ ಮಾಹಿತಿ, ವಸ್ತುಲೋಪ, ದೋಷ, ಗುಣಮಟ್ಟ ಮುಂತಾದವುಗಳ ಕುರಿತು ಆಸಕ್ತ ಸಾರ್ವಜನಿಕರು ಜಾಹೀರಾತುದಾರ ರೊಡನೆಯೇ ವ್ಯವಹರಿಸಬೇಕಾಗುತ್ತದೆ. ಅದಕ್ಕೆ ಪತ್ರಿಕೆ ಜವಾಬ್ದಾರಿಯಾಗುವುದಿಲ್ಲ.
– ಜಾಹೀರಾತು ವ್ಯವಸ್ಥಾಪಕರು.

# ಪ್ರಾಯೋಗಿಕ ಕೌಶಲ್ಯ ವಿಜ್ಞಾನದತ್ತ ಆಸಕ್ತಿ ಹೆಚ್ಚಿಸುತ್ತದೆ



**ಹಂಪಿ ಟೈಮ್ಸ್ ಹೊಸಪೇಟೆ**

ಪ್ರಯೋಗಗಳನ್ನು ಮಾಡುವುದರ ಮೂಲಕ ವಿದ್ಯಾರ್ಥಿಗಳು ವಿಜ್ಞಾನದ ಬಗ್ಗೆ ತಿಳಿಯಲು ಆಸಕ್ತಿಯನ್ನು ಹೆಚ್ಚಿಸುತ್ತದೆ ಎಂದು ಸರ್ಕಾರಿ ಪದವ ಪೂರ್ವ ಕಾಲೇಜಿನ ಉಪನ್ಯಾಸಕ ದೊಡ್ಡ ಹನುಮಂತಪ್ಪ ಹೇಳಿದರು.

ನಗರದ ಶ್ರೀ ಶಂಕರ್ ಆನಂದ್ ಸಿಂಗ್ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನಲ್ಲಿ ಐ ಕ್ಯೂ ಎ ಸಿ ಏರ್ಪಡಿಸಲಾಗಿದ್ದ ವಿಜ್ಞಾನ ವಸ್ತು ಪ್ರದರ್ಶನ ಉದ್ಘಾಟಿಸಿ ಮಾತನಾಡಿದ ಅವರು, ವಿದ್ಯಾರ್ಥಿಗಳು ಪ್ರಯೋಗಗಳನ್ನು ಮಾಡುವುದರ ಮೂಲಕ ತಮ್ಮ ಆಸಕ್ತಿಯನ್ನು ವಿಜ್ಞಾನವನ್ನು ಅಭ್ಯಾಸ ಮಾಡಲು ಸಾಧ್ಯವಾಗುತ್ತದೆ ಹಾಗೂ ಮೂಲವಿಜ್ಞಾನದ ಕಡೆ ತಮ್ಮ ಆಸಕ್ತಿ ಬೆಳೆ ಯುತ್ತದೆ ಎಂದು ತಿಳಿಸಿದರು.

ನಂತರ ಸರ್ಕಾರಿ ಬಾಲಕಿಯರ ಪದವಿ ಪೂರ್ವ ಕಾಲೇಜಿನ ಉಪನ್ಯಾಸಕರಾದ ಮಲ್ಲಿಕಾರ್ಜುನ್ ಮಾತನಾಡಿ, ಪ್ರಯೋಗಗಳನ್ನು ಮಾಡುವುದರ ಮೂಲಕ ವಿದ್ಯಾರ್ಥಿಗಳು ತಮ್ಮ ಜ್ಞಾನವನ್ನು ಹೆಚ್ಚಿಸಿಕೊಳ್ಳಲು ಸಹಾಯವಾಗುತ್ತದೆ ಎಂದು ತಿಳಿಸಿದರು.

ಈ ವಸ್ತು ಪ್ರದರ್ಶನವು ದಿನಾಂಕ 23.01.2024 ರಿಂದ 25.01.2024 ರ ವರೆಗೆ ನಡೆಯಲಿದ್ದು ಈ ವಸ್ತು ಪ್ರದರ್ಶನವನ್ನು ತಾಲೂಕಿನ ಎಲ್ಲಾ ಪದವಿ ಪೂರ್ವ ಕಾಲೇಜಿನ ವಿದ್ಯಾರ್ಥಿಗಳು ವೀಕ್ಷಿಸಿ ಇದರ ಲಾಭವನ್ನು ಪಡೆಯಬಹುದಾಗಿದೆ ಎಂದು ಐಕ್ಯೂ ಎ ಸಿ ಸಂಚಾಲಕರಾದ ಡಾ. ಗುರುರಾಜ್ ಅವರಾದಿ ತಿಳಿಸಿದರು.

ಈಸಂದರ್ಭದಲ್ಲಿಕಾಲೇಜಿನಪ್ರಾಂಶುಪಾಲರಾದ ಶಿವಪ್ಪ ಹಾಗೂ ಭೌತಶಾಸ್ತ್ರ ವಿಭಾಗದ ಪ್ರಾಧ್ಯಾಪಕರುಗಳಾದ ಟಿ ಹೆಚ್ ಎಂ ದಾರುಕ ಸ್ವಾಮಿ,ಮಂಜುನಾಥ,ಸುಜಾತ, ರಾಧಾ ಹಾಗೂ ಸಸ್ಯಶಾಸ್ತ್ರ ಉಪನ್ಯಾಸಕರಾದ ರಾಕೇಶ,ಕಾದಂಬರಿ ಪ್ರಾಣಿ ಶಾಸ್ತ್ರಉಪನ್ಯಾಸಕರಾದ ಪವನ್ ರಾಮಕೃಷ್ಣ ಹಾಗೂ ಗಣಕಶಾಸ್ತ್ರ ವಿಭಾಗದ ಪ್ರಾಧ್ಯಾಪಕರಾದ ಹರೀಶ್ ಗುಜ್ಜಾರ ಹಾಜರಿದ್ದರು.

**IN THE COURT OF THE CIVIL JUDGE AND J.M.F.C. AT KUDLIGI, Crl. Misc. No.937/2023**

Between:
1.) G.D Balappa, Son of late Dodappa aged about 73, years, 2.) Smt. Balamma wife of Erappa aged about 78 years
All are Hindu, Agriculturist, residing at Alur Village Kudligi Taluk Vijayanagara Dist ........Petitioner And
The Tahasildar Kudligi .........Respondent

**SUMMONS TO INTERESTED PERGRAND FATHER U/O V RULE 20(A) R/W SEC 151 OF CPC FILED ON BEHALF OF THE PETITIONER.**

Whereas the above petitioners have instituted above petition to get the death certificate of their deceased petitioners Father by name Thimmajji @ Thimmakka wife of late Doddappa was died on 20/08/2016 Alur Village Kudligi Taluk Vijayanagara Dist. on the file of the civil Judge& JMFC at Kudligi, the The Tahasildar Kudligi is the respondent. The interested per Great s are hereby summoned to appear in this court in per or by pleader duly instructed and able to answer all material question relating to the above petition on 25/01/2024 at 11 A.M. and interested per sare directed to produce all the documents upon which you intended to rely in support of your defense.
Take notice that in default of your appearance on that day, above mentioned case will be heard and determined ex parte.
Given under my hand and seal of this Hon'ble Court on 19/01/2024

By Order of the court
Chief Ministerial Officer
Civil Judge J.D) Court Kudligi

Sashi Kumar Yadav.K
Advocate, Kudligi

**IN THE COURT OF THE CIVIL JUDGE AND J.M.F.C. AT KUDLIGI, Crl. Misc. No.935/2023**

Between:
1.) G.D Balappa, Son of late Dodappa aged about 73, years, 2.) Smt. Balamma wife of Erappa aged about 78 years
All are Hindu, Agriculturist, residing at Alur Village Kudligi Taluk Vijayanagara Dist ..........Petitioner And
The Tahasildar Kudligi ........ Respondent

**SUMMONS TO INTERESTED PERGRAND FATHER U/O V RULE 20(A) R/W SEC 151 OF CPC FILED ON BEHALF OF THE PETITIONER.**

Whereas the above petitioners have instituted above petition to get the death certificate of their deceased petitioners Father by name Doddappa Son of late Gudri Balappa was died on 13/09/1977 Alur Village Kudligi Taluk Vijayanagara Dist. on the file of the civil Judge& JMFC at Kudligi, the The Tahasildar Kudligi is the respondent. The interested per Great s are hereby summoned to appear in this court in per or by pleader duly instructed and able to answer all material question relating to the above petition on 25/01/2024 at 11 A.M. and interested per sare directed to produce all the documents upon which you intended to rely in support of your defense.
Take notice that in default of your appearance on that day, above mentioned case will be heard and determined ex parte.
Given under my hand and seal of this Hon'ble Court on 19/01/2024

By Order of the court
Chief Ministerial Officer
Civil Judge J.D) Court Kudligi

Sashi Kumar Yadav.K
Advocate, Kudligi

**IN THE COURT OF THE CIVIL JUDGE AND J.M.F.C. AT. KUDLIGI, Crl. Misc. No.936/2023**

Between:
1.) G.D Balappa, Son of late Dodappa aged about 73, years, 2.) Smt. Balamma wife of Erappa aged about 78 years
All are Hindu, Agriculturist, residing at Alur Village Kudligi Taluk Vijayanagara Dist .......Petitioner And
The Tahasildar Kudligi ...Respondent

**SUMMONS TO INTERESTED PERGRAND FATHER U/O V RULE 20(A) R/W SEC 151 OF CPC FILED ON BEHALF OF THE PETITIONER.**

Whereas the above petitioners have instituted above petition to get the death certificate of their deceased petitioners Sister by name Nagamma wife of late Kaddeppa was died on 05/05/2020 Imadapura Village Kudligi Taluk Vijayanagara Dist. on the file of the civil Judge& JMFC at Kudligi, the The Tahasildar Kudligi is the respondent. The interested per Great s are hereby summoned to appear in this court in per or by pleader duly instructed and able to answer all material question relating to the above petition on 25/01/2024 at 11 A.M. and interested per sare directed to produce all the documents upon which you intended to rely in support of your defense.
Take notice that in default of your appearance on that day, above mentioned case will be heard and determined ex parte.
Given under my hand and seal of this Hon'ble Court on 19/01/2024

By Order of the court
Chief Ministerial Officer
Civil Judge J.D) Court Kudligi

Sashi Kumar Yadav.K
Advocate, Kudligi





ಮೈಕ್ರೋ ನ್ಯೂಸ್

## ಜ.24ರಂದು ಮಹನೀಯರ ಜಯಂತಿಯ ಪೂರ್ವಭಾವಿ ಸಭೆ

**ಹಂಪಿ ಟೈಮ್ಸ್ ಬಳ್ಳಾರಿ**
ಜಿಲ್ಲಾಡಳಿತ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ವತಿಯಿಂದ ಫೆ.01 ರಂದು ಮಡಿವಾಳ ಮಾಚಿದೇವ ಜಯಂತಿ, ಫೆ.10 ರಂದು ಕಾಯಕ ಶರಣರ ಜಯಂತಿ ಆಚರಣೆ ಕುರಿತು ಅಪರ ಜಿಲ್ಲಾಧಿಕಾರಿ ಮೊಹಮ್ಮದ್ ಝುಬೇರ್ ಅವರ ಅಧ್ಯಕ್ಷತೆಯಲ್ಲಿ ಜ.24 ರಂದು ಮಧ್ಯಾಹ್ನ 12.30 ಗಂಟೆಗೆ ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಪೂರ್ವಭಾವಿ ಸಭೆಯನ್ನು ಏರ್ಪಡಿಸಲಾಗಿದೆ ಎಂದು ಜಿಲ್ಲಾಡಳಿತ ತಿಳಿಸಿದೆ.

## ಬಿಜೆಪಿ ಕಾರ್ಯಕರ್ತರ ದಾಳಿ ಖಂಡಿಸಿ ಕೈ ಕಾರ್ಯಕರ್ತರು ಪ್ರತಿಭಟನೆ




**ಹಂಪಿ ಟೈಮ್ಸ್ ಹೊಸಪೇಟೆ**
ನಗರದಲ್ಲಿ ವಿಜಯನಗರ ಜಿಲ್ಲಾ ಕಾಂಗ್ರೆಸ್ ಸಮಿತಿವತಿಯಿಂದ ಮಂಗಳವಾರ ಎಐಸಿಸಿ ಮಾಜಿ ಅಧ್ಯಕ್ಷ, ಲೋಕಸಭಾ ಸದಸ್ಯ ರಾಹುಲ್ ಗಾಂಧಿ ನೇತೃತ್ವದಲ್ಲಿ ಜರುಗುತ್ತಿರುವ ಭಾರತ ಜೋಡೋ ನ್ಯಾಯ ಯಾತ್ರೆ ಸಂದರ್ಭದಲ್ಲಿ ಬಿಜೆಪಿ ಪಕ್ಷದ ಕಾರ್ಯಕರ್ತರು ರಾಹುಲ್ ಗಾಂಧಿ ಅವರ ಬಸ್ಸನ್ನು ಅಡ್ಡಗಟ್ಟಿ ದಾಳಿ ಮುಂದಾಗಿರುವುದು ಖಂಡಿಸಿ ಪ್ರತಿಭಟಿಸಿದರು.
ನಗರದ ಡಾ.ಬಿ.ಆರ್.ಅಂಬೇಡ್ಕರ್ ವೃತ್ತ ದಿಂದ ಹೊಸಪೇಟೆ ತಾಲ್ಲೂಕು ಕಚೇರಿಗೆ ಪ್ರತಿಭಟನೆ ಮೆರವಣಿಗೆ ಮೂಲಕ ತೆರಳಿ ತಹಶೀಲ್ದಾರ್ ಮೂಲಕ ರಾಜ್ಯಪಾಲರವರಿಗೆ ಮನವಿ ಸಲ್ಲಿಸಿದರು.
ಪ್ರತಿಭಟನೆಯಲ್ಲಿ ಮಾಜಿ ಲೋಕಸಭೆ ಸದಸ್ಯ ಕೆಪಿಸಿಸಿ ಉಪಾಧ್ಯಕ್ಷ ವಿ.ಎಸ್.ಉಗ್ರಪ್ಪ, ಜಿಲ್ಲಾ ಉಪಾಧ್ಯಕ್ಷ ಕೆ.ಎಂ.ಹಾಲಪ್ಪ, ಪ್ರಚಾರ ಸಮಿತಿ ಜಿಲ್ಲಾಧ್ಯಕ್ಷ ಹೆಚ್.ಎನ್.ಎಫ್.ಮೊಹಮ್ಮದ್ ಇಮಾಮ್ ನಿಯಾಜಿ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ರವಿ ಕುಮಾರ್, ಕೊಟಗಿನಾಳ ಮಲ್ಲಿಕಾರ್ಜುನ, ಬ್ಲಾಕ್ ಕಾಂಗ್ರೆಸ್ ಸಮಿತಿ ಅಧ್ಯಕ್ಷರುಗಳಾದ ವಿನಾಯಕ ಶೆಟ್ಟರ್, ಸಿ.ಖಾಜಾ ಹುಸೇನ್, ಅಟವಾಳಗಿ ಕೊಟ್ರೇಶ್, ಕ್ವಾವ್ವಿ ಹನುಮಂತಪ್ಪ, ಕುಮಾರ್ ಗೌಡ, ಪ್ರೇಮ ಕುಮಾರ್, ಬೇಲೂರು ಅಂಜಿನಪ್ಪ, ಜಿಲ್ಲಾ ಮುಂಚೂಣಿ ಘಟಕಗಳ ಜಿಲ್ಲಾಧ್ಯಕ್ಷರುಗಳಾದ ಜಿ.ತಮ್ಮನ್ನಳೆಪ್ಪ, ಡಿ.ವೆಂಕಟರಮಣ, ಬಿ.ಮಾರೆಣ್ಣ, ಸೋಮಶೇಖರ್ ಬಣ್ಣದ ಮನೆ, ಏಕಂಬರೇಶ ನಾಯ್ಕ, ಹಿಂದುಳಿದ ವರ್ಗಗಳ ವಿಭಾಗದ ಕೆಪಿಸಿಸಿ ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ. ಮಂಜುನಾಥ ಯಾದವ್, ಕೆಪಿಸಿಸಿ ಪದವೀಧರ ವಿಭಾಗದ ರಾಜ್ಯ ಪ್ರಧಾನ ಕಾರ್ಯದರ್ಶಿ ಪಿ.ವೀರಾಂಜನೇಯ್ಯ, ಯುವ ಕಾಂಗ್ರೆಸ್ ಉಪಾಧ್ಯಕ್ಷ ಗಂಗಾಧರ ಗೌಡ, ಮುಖಂಡರಾದ ಅನಂತ ಪದ್ಮನಾಭ ಸ್ವಾಮಿ, ಸಿದ್ದೇಶ್, ನಗರಸಭೆ ಸದಸ್ಯರಾದ ಅಸ್ಲಾಂ ಮಾಳಗಿ, ಕಾರದ ಪುಡಿ ಮಹೇಶ್, ಮೊಹಮ್ಮದ್ ಗೌಸ್, ಅಂಕ್ಲೇಶ್ ನಾಯಕ, ಎಸ್.ಬಿ.ಶ್ರೀನಿವಾಸ, ಶೇಕ್ ತಾಜುದ್ದೀನ್, ದೇವರ ಮನೆ ಕನ್ನಿಶ್ವರ, ಚಾಂದ್, ಪ್ರಮೋದ್ ಪುಣ್ಯ ಮೂರ್ತಿ, ಬಾಣದ ಗಣೇಶ, ವೀರಭದ್ರ ನಾಯಕ್, ಸದ್ದಾಂ, ಯರ್ರಿಸ್ವಾಮಿ, ಟಿ.ಬಿ.ಡ್ಯಾಂ ರಮೇಶ್, ಬಿ.ತಾಯಪ್ಪ, ಕಾರ್ತಿಕ ,ಭರತಕುಮಾರ ್,ಪರಶುರಾಮ,ಸೋಹೈಲ್, ಅಮೀನಮ್ಮ, ಯೋಗ ಲಕ್ಷ್ಮೀ, ಬಾನುಭೀ ಶಿಲ್ಪ ಮೋಹನ್, ಕವಿತಾ ನಾಯಕ, ಮಂಜುಳಾ, ರಷೀದಾ ಬಾನು, ನೇತ್ರಾ ಪಾಟೀಲ್, ಲಕ್ಷ್ಮೀ, ನಾಗಮ್ಮ, ತಾರಾ ಭಾಷ, ಶಫೀ, ರಫೀಕ್, ಪೀರಾ ಸಾಬ್, ಸೇರಿದಂತೆ ಜಿಲ್ಲಾ ಸಮಿತಿ ಪದಾಧಿಕಾರಿಗಳು ಜಿಲ್ಲಾ , ತಾಲೂಕು ಮುಂಚೂಣಿ ಘಟಕಗಳ ಪದಾಧಿಕಾರಿಗಳು ಚುನಾಯಿತ ಪ್ರತಿನಿಧಿಗಳು ಕಾರ್ಯಕರ್ತರು ಇದ್ದರು.

# ನಾಲ್ವರು ಬಾಲ- ಕಿಶೋರ ಕಾರ್ಮಿಕರ ರಕ್ಷಣೆ

### ಗ್ಯಾರೇಜ್, ಹೋಟೆಲ್, ಮೆಕ್ಯಾನಿಕ್ ಶಾಪ್, ಇಟ್ಟಂಗಿ ಭಟ್ಟಿ ಸೇರಿದಂತೆ ವಿವಿಧೆಡೆ ಆಕಸ್ಮಿಕ ದಾಳಿ



**ಹಂಪಿ ಟೈಮ್ಸ್ ಬಳ್ಳಾರಿ**
ಕಾರ್ಮಿಕ ಇಲಾಖೆ ವತಿಯಿಂದ ಸಿರುಗುಪ್ಪ ನಗರದಲ್ಲಿ ವಿವಿಧೆಡೆ ದಾಳಿ ನಡೆಸಿ 04 ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ ರಕ್ಷಣೆ ಮಾಡಲಾಗಿದೆ ಎಂದು ಜಿಲ್ಲಾ ಬಾಲಕಾರ್ಮಿಕ ಯೋಜನೆಯ ಯೋಜನಾ ನಿರ್ದೇಶಕ ಎ.ಮೌನೇಶ ತಿಳಿಸಿದ್ದಾರೆ.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಬಾಲಕಾರ್ಮಿಕ ಯೋಜನೆ, ಕಾರ್ಮಿಕ ಇಲಾಖೆ, ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣ ಘಟಕ, ಶಿಕ್ಷಣ ಇಲಾಖೆ, ಆರೋಗ್ಯ ಇಲಾಖೆ, ಸಮಾಜ ಕಲ್ಯಾಣ ಇಲಾಖೆ ಮತ್ತು ಚೈಲ್ಡ್‌ಲೈನ್ ಸಹಯೋಗದೊಂದಿಗೆ ಸಿರುಗುಪ್ಪ ತಾಲ್ಲೂಕು ತಹಶೀಲ್ದಾರರ ಕಚೇರಿ ಸಭಾಂಗಣದಲ್ಲಿ ಬಾಲಕಾರ್ಮಿಕ ಹಾಗೂ ಕಿಶೋರ ಕಾರ್ಮಿಕ (ನಿಷೇಧ ಮತ್ತು ನಿಯಂತ್ರಣ) ಕಾಯ್ದೆ 1986 ರಡಿ ನೇಮಕವಾದ ನಿರೀಕ್ಷಕರ ಟಾಸ್ಕ್ ಪೋರ್ಸ್ ಸಮಿತಿ ಸಭೆಯನ್ನು ನಡೆಸಲಾಗಿದೆ.

ಅದರಂತೆ ಜಿಲ್ಲಾಧಿಕಾರಿಗಳ ನಿರ್ದೇಶನದ ಮೇರೆಗೆ ಸಿರುಗುಪ್ಪ ನಗರದಲ್ಲಿ ಸಿಂಧನೂರು ರಸ್ತೆ, ದೇಶನೂರು, ಇಬ್ರಾಹಿಂಪುರ, ಹಾಗೂ ನಗರದ ಪ್ರಮುಖ ರಸ್ತೆಗಳಲ್ಲಿರುವ ಮಂತಾದ ಸ್ಥಳಗಳಲ್ಲಿರುವ ಗ್ಯಾರೇಜ್, ಬೇಕರಿ, ಹೋಟೆಲ್, ಮೆಕ್ಯಾನಿಕ್ ಶಾಪ್, ಕಿರಾಣಿ ಅಂಗಡಿ, ಇಟ್ಟಂಗಿ ಭಟ್ಟಿ, ಗುಜರಿ ಶಾಪ್ ಇತ್ಯಾದಿ ಉದ್ದಿಮೆಗಳ ಮೇಲೆ ಆಕಸ್ಮಿಕ ದಾಳಿ ಮಾಡಿ 04 ಬಾಲಕಾರ್ಮಿಕ ಹಾಗೂ ಕಿಶೋರಕಾರ್ಮಿಕ ಮಕ್ಕಳನ್ನು ಕೆಲಸದಿಂದ ಬಿಡುಗಡೆಗೊಳಿಸಿ ಮಕ್ಕಳನ್ನು ಮುಖ್ಯವಾಹಿನಿ ಶಾಲೆಗಳಿಗೆ ಮರು ದಾಖಲಿಸಲಾಯಿತು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಈ ಟಾಸ್ಕ್ ಪೋರ್ಸ್ ಸಮಿತಿಯಲ್ಲಿ ತಹಶೀಲ್ದಾರ ಹೆಚ್.ವಿಶ್ವನಾಥ್, ಕಾರ್ಮಿಕ ನಿರೀಕ್ಷಕ ಮಂಜುನಾಥ, ಆರೋಗ್ಯ ನಿರೀಕ್ಷಕ ಜೆ. ಗೋವಿಂದಪ್ಪ, ಜಿಲ್ಲಾ ತಂಬಾಕು ನಿಯಂತ್ರಣ ಕೋಶದ ಮಲ್ಲೇಶಪ್ಪ, ಕಂದಾಯ ನಿರೀಕ್ಷಕ ಬಸವರಾಜ್.ಎ., ಚೈಲ್ಡ್ ಲೈನ್ ಸಿಬ್ಬಂದಿ ಅರುಣ್ ಸೇರಿದಂತೆ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಕಂದಾಯ ಇಲಾಖೆ ಹಾಗೂ ವಿವಿಧ ಇಲಾಖೆಯ ಅಧಿಕಾರಿಗಳು ಹಾಜರಿದ್ದರು.

## ಅತಿಥಿ ಉಪನ್ಯಾಸಕರ ಹುದ್ದೆಗೆ ಅರ್ಜಿ ಆಹ್ವಾನ

**ಹಂಪಿ ಟೈಮ್ಸ್ ರಾಯಚೂರು**
ಸರ್ಕಾರಿ ಉಪಕರಣಾಗಾರ ಮತ್ತು ತರಬೇತಿ ಕೇಂದ್ರ, ಸರ್ಕಾರಿ ತೋಟ, ಕರಡಕಲ್ ರಸ್ತೆ, ಲಿಂಗಸುಗೂರು ಕೇಂದ್ರದಲ್ಲಿ (Guest Faculty) ಅತಿಥಿ ಉಪನ್ಯಾಸಕರು ಅರ್ಜಿ ಆಹ್ವಾನಿಸಲಾಗಿದೆ ಎಂದು ಲಿಂಗಸುಗೂರು ಜಿ.ಟಿ.ಟಿ.ಸಿ ಪ್ರಾಂಶುಪಾಲರು ತಿಳಿಸಿದ್ದಾರೆ.
ವಿದ್ಯಾರ್ಹತೆ: B.E , M-Tech ನಲ್ಲಿ ಮೆಕಾನಿಕಲ್, ಎಲೆಕ್ಟ್ರಿಕಲ್ & amp; ಎಲೆಕ್ಟ್ರಾನಿಕ್ಸ್ ಇಂಜಿನಿಯರಿಂಗ್ ಮತ್ತು ಎಲೆಕ್ಟ್ರಾನಿಕ್ಸ್ ಕಮ್ಯೂನಿಕೇಷನ್‌ನಲ್ಲಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳಿಗೆ ಅರ್ಜಿಯನ್ನು ಆಹ್ವಾನಿಸಲಾಗಿದ್ದು, ಜ.23 ರಿಂದ ಜ.29ರವರೆಗೆ ಅರ್ಜಿ ಸಲ್ಲಿಸಬಹುದು. ಹೆಚ್ಚಿನ ಮಾಹಿತಿಗಾಗಿ ಪ್ರಾಂಶುಪಾಲರು ದೂ.ಸಂಖ್ಯೆ: 9916231899ಗೆ ಸಂಪರ್ಕಿಸುವಂತೆ ಲಿಂಗಸುಗೂರು ಜಿ.ಟಿ.ಟಿ.ಸಿ ಪ್ರಾಂಶುಪಾಲರು ತಿಳಿಸಿದ್ದಾರೆ.

# ಸೊಳ್ಳೆ ನಿಯಂತ್ರಣಕ್ಕೆ ಮಾದರಿ ಪ್ರದರ್ಶನ



**ಹಂಪಿ ಟೈಮ್ಸ್ ಹೂವಿನಹಡಗಲಿ**
ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ವಿಜಯನಗರ ಸಾರಥ್ಯದಲ್ಲಿ ಜಿಲ್ಲಾ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣ ವಿಭಾಗ ವಿಜಯನಗರ ಜಿಲ್ಲೆ ತಾಲೂಕು ಆರೋಗ್ಯ ಅಧಿಕಾರಿಗಳು ಹೂವಿ ಹಡಗಲಿ ಹಾಗೂ ಸಾರ್ವಜನಿಕ ಶಿಕ್ಷಣ ಇಲಾಖೆ ಮತ್ತು ಕರ್ನಾಟಕ ವಿಜ್ಞಾನ ಪರಿಷತ್ ಇವರ ಸಹಯೋಗದೊಂದಿಗೆ ಸೋಗಿ ರಸ್ತೆಯಲ್ಲಿರುವ ಮೌಂಟ್ ಕಾರ್ಮೆಲ್ ಜ್ಯೋತಿ ಚರ್ಚನಲ್ಲಿ ಸದರಿ ಕಾರ್ಯಕ್ರಮವನ್ನ ಆಯೋಜಿಸಲಾಗಿತ್ತು.

ಈ ಕಾರ್ಯಕ್ರಮದಲ್ಲಿ ಆಯ್ದಾ ಪ್ರಾಥಮಿಕ ಹಾಗೂ ಪ್ರೌಢ ಶಾಲಾ ವಿದ್ಯಾರ್ಥಿಗಳಿಂದ ಸೊಳ್ಳೆ ನಿಯಂತ್ರಣ ವಿಧಾನಗಳ ಮಾದರಿ ಪ್ರದರ್ಶನವನ್ನು ಏರ್ಪಡಿಸಲಾಗಿದ್ದು, ಇದರಲ್ಲಿ ಪ್ರೌಢಶಾಲೆ ಇಂದ 6 ತಂಡಗಳು ಹಾಗೂ ಪ್ರಾಥಮಿಕ ಶಾಲೆಯಿಂದ 5 ತಂಡಗಳು ಭಾಗವಹಿಸಿದ್ದವು. ಹಾಗೂ ಇದರ ಉದ್ದೇಶ ವಿದ್ಯಾರ್ಥಿಗಳಲ್ಲಿ ರೋಗ ವಾಹಕ ಆಶ್ರಿತ ರೋಗಗಳ ನಿಯಂತ್ರಣ ಅದರಲ್ಲು ಮುಖ್ಯವಾಗಿ ಮಲೇರಿಯಾ. ಡೇಂಗ್ಯೂ. ಚಿಕುನ್ ಗುನ್ಯ, ಮೆದುಳು ಜ್ವರ, ಹಾಗೂ ಆನೆಕಾಲು ರೋಗ ನಿಯಂತ್ರಣದಲ್ಲಿ ಶಾಲಾ ಮಕ್ಕಳು ಹಾಗೂ ಸಮುದಾಯದ ಸಹಭಾಗಿತ್ವಕ್ಕೆ ಒತ್ತು ನೀಡುವುದು ಹಾಗೂ ಪ್ರೋತ್ಸಹಿಸುವುದು ಈ ಕಾರ್ಯಕ್ರಮ ಉದ್ದೇಶ ವಾಗಿದೆ. ಕಸಾಪ ಅದ್ಯಕ್ಷ ಟಿ.ಪಿ ವೀರೇಂದ್ರ ಪಾಟೀಲ್ ಉದ್ಘಾಟಿಸಿದರು. ಅಧ್ಯಕ್ಷತೆಯನ್ನು ತಾಲೂಕು ಆರೋಗ್ಯ ಅಧಿಕಾರಿಗಳ ಅನುಪಸ್ಥಿತಿಯಲ್ಲಿ ಪ್ರಾ ಆ ಕೇಂದ್ರದ ವೈದ್ಯಾಧಿಕಾರಿ ಡಾ.ವಿನೋದ್. ಎಲ್ ವಹಿಸಿಕೊಂಡಿದ್ದರು. ಮುಖ್ಯ ಅತಿಥಿಗಳಾಗಿ ಕರ್ನಾಟಕ ವಿಜ್ಞಾನ ಪರಿಷತ್ ತಾಲೂಕು ಉಪಾಧ್ಯಕ್ಷರಾದ ಹೆಚ್.ಜಿ. ಪಾಟೀಲ್. ಎಸ್.ಕೆ.ಜಿ.ಜೆ ಕಾಲೇಜಿನ ವಿಜ್ಞಾನ ಶಿಕ್ಷಕರಾದ ನರೇಶ್ ಹಣ್ಣಿ ವಹಿಸಿಕೊಂಡಿದ್ದರು. ಕಾರ್ಯಕ್ರಮ ನಿರೂಪಣೆಯನ್ನ ಜಯಪ್ರಕಾಶ ಬಸೆಟ್ಟಿ, ಸ್ವಾಗತವನ್ನು ಶ್ರೀ ಬಿರಬ್ಬಿ ಮಹೇಶ್ ಕ್ಷೇತ್ರ ಕಾರ್ಯಕ್ರಮ ವ್ಯವಸ್ಥಪಕಾರು ಹಾಗೂ ಪ್ರಾರ್ಥನೆಯನ್ನ ಕುಮಾರಿ ಗೀತಾಂಜಲಿ ಬಿ.ಎಸ್ ಮತ್ತು ಪ್ರಸ್ಥವಿಕ ನುಡಿಯನ್ನ ಶ್ರೀ ಕೆ ಮಲ್ಲಪ್ಪ ಹಿರಿಯಾ ಆರೋಗ್ಯ ನಿರೀಕ್ಷಣಾಧಿಕಾರಿ ಜಿಲ್ಲಾ ಮಲೇರಿಯಾ ಕಛೇರಿ ವಿಜಯನಗರ ಇವರು ವಚಿಸಿದರು.

ಈ ಸಂಧರ್ಭದಲ್ಲಿ ತಾಲೂಕು ಮಾಲೇರಿಯಾ ತಾಂತ್ರಿಕ ಮೇಲ್ವಿಚಾರಕರದ ನಾಗರಾಜ ಕೆ.ಎ. ರಾಜೇಂದ್ರ ಜಿ, ಬಸವರಾಜ ವಿ. ಸುನಿಲ್ ಎಂ ಪಿ ಎಂ ಹಾಗೂ ಶಿಕ್ಷಕರಾದ ಶ್ರೀಮತಿ ಸಾವಿತ್ರಿ ಶ್ರೀಮತಿ ಶಹಜನ್, ಕುಮಾರಿ ಪವಿತ್ರ ಇತರರಿದ್ದರು.

# ವೀರಸೇನಾನಿ ನೇತಾಜಿ ಸುಭಾಷ್ ಚಂದ್ರ ಬೋಸ್

**ಹಂಪಿ ಟೈಮ್ಸ್ ಹರಪನಹಳ್ಳಿ**
ತಾಲ್ಲೂಕಿನ ಯರಬಳ್ಳಿ ಗ್ರಾಮದ ಸ. ಹಿ. ಪ್ರಾ. ಶಾಲೆಯಲ್ಲಿ ಬಡ್ತಿ ಮುಖ್ಯ ಗುರುಗಳಾದ ಬಿ. ಕರಿಬಸಪ್ಪ ಪೂಜೆ ನೆರವೇರಿಸಿ ಮಾತನಾಡಿ, ಸುಭಾಷ್ ಚಂದ್ರ ಬೋಸ್ ಸ್ವಾತಂತ್ರ ಹೋರಾಟಗಾರರು, ವೀರಸೇನಾನಿ ಯಾಗಿದ್ದರು, ಐಎನ್‌ಎ (ಇಂಡಿಯನ್ ನ್ಯಾಷನಲ್ ಆರ್ಮಿ) ಸಂಸ್ಥೆ ಸ್ಥಾಪನೆ ಮಾಡಿದ್ದರು,ಇವರು ನೇತಾಜಿ ಎಂದೇ ಪ್ರಸಿದ್ಧರಾದ ಭಾರತದ ಸ್ವಾತಂತ್ರ್ಯ ಸಂಗ್ರಾಮದ ಪ್ರಮುಖ ಜನನಾಯಕರಲ್ಲಿ ಒಬ್ಬರು.

ಬ್ರಿಟಿಷ್‌ರ ವಿರುದ್ಧ ಹೋರಾಡಿ ಜನರಿಗೆ 'ಮಾಡು ಇಲ್ಲವೆ ಮಡಿ'ಎಂಬ ಕರೆ ಕೊಟ್ಟಿದ್ದರು, ಇವರ ಹುಟ್ಟಿದ ದಿನದಂದೇ 'ಪರಾಕ್ರಮ ದಿನ'ವನ್ನಾಗಿ ಆಚರಿಸುತ್ತಿದ್ದೇವೆ. ಇವರು ಅಜಾದ್ ಹಿಂದ್ ಸೇನೆ ಸ್ಥಾಪನೆ ಮಾಡಿದರು,




1933 ಫೆಬ್ರವರಿ 23 ರಂದು ಯುರೋಪಿನಲ್ಲಿ ಭಾರತದ ಸ್ವಾತಂತ್ರ್ಯ ಹೋರಾಟಪರ ಅಭಿಯಾನ. ಹೀಗೆ ಸ್ವಾತಂತ್ರ್ಯಕ್ಕಾಗಿ ಹಲವಾರು ಚಳುವಳಿಗಳನ್ನು ಮಾಡಿದ್ದಾರೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಜಿ. ಲಿಂಗರಾಜ್, ಎಲ್. ಮೂರ್ತಿ ನಾಯ್ಕ್,ಬಿ. ಲಲಿತಮ್ಮ, ಮುಬೀನಾ ಸಹಶಿಕ್ಷಕರು ಹಾಗೂ ಮಕ್ಕಳು ಹಾಜರಿದ್ದರು.

# ಸುಭಾಷ್‌ರ ಸ್ವಾಭಿಮಾನ ಭಾರತ ನಿರ್ಮಿಸಿ ವಸಾಹತು ಶಾಹಿ ಮುಷ್ಟಿಯಿಂದ ಹೊರಬರಲು ಯುವಕರು ಸಿದ್ಧರಾಗಿ



**ಹಂಪಿ ಟೈಮ್ಸ್ ಹೊಸಪೇಟೆ**
ಸ್ವಾಭಿಮಾನದ ಅಲೆಯನ್ನು ಸ್ವಾತಂತ್ರ್ಯ ಹೋರಾಟದಲ್ಲಿ ಹುಟ್ಟುಹಾಕುವ ಮೂಲಕ ದೇಶದ ಸ್ವಾತಂತ್ರದ ಚಳುವಳಿಗೆ ಹೊಸ ದಿಕ್ಕು ನೀಡಿದ ಕಿರ್ತಿ ಸುಭಾಷ್ ಚಂದ್ರ ಬೋಸ್‌ರಿಗೆ ಸಲ್ಲುತ್ತದೆ ಎಂದು ನಿವೃತ್ತ ಪ್ರಾಧ್ಯಾಪಕ ಡಾ. ವಿಠ್ಠಲರಾವ್ ಗಾಯಕವಾಡ್ ಅಭಿಪ್ರಾಯಪಟ್ಟರು.

ನಗರದ ಮಹಾಲಕ್ಷ್ಮೀ ಯೋಗ ಕೇಂದ್ರದಲ್ಲಿ ಪತಂಜಲಿ ಯೋಗ ಸಮಿತಿ ಹಮ್ಮಿಕೊಂಡಿದ್ದ ನೇತಾಜಿ ಸುಭಾಷ್ ಚಂದ್ರ ಬೋಸ್ ರವರ 127ನೇ ಜನ್ಮ ದಿನಾಚರಣೆ ಅಂಗವಾಗಿ ಮಂಗಳವಾರ ಹಮ್ಮಿಕೊಂಡಿದ್ದ ಕಾರ್ಯಕ್ರಮದಲ್ಲಿ ಮಾತನಾಡಿದರು. ಬೋಸ್ ಬಹು ದೂರ ದೃಷ್ಟಿಯ ಅಖಂಡ ಭಾರತದ ಕನಸು ಕಂಡ ಹೋರಾಟಗಾರರಾಗಿದ್ದರು. ಸ್ವತಂತ್ರಭಾರತ ವಿಭಜನೆಯಾದರೆ ಮುಂದೆ ದೊಡ್ಡ ಸಮಸ್ಯೆಯಾಗಲಿದೆ ಎಂದು ಅಂದೆ ಮನಗಂಡು ವಿರೋಧಿಸಿದ್ದರು. ಅದಕ್ಕೆ ಸಾಕ್ಷಿ ಎನ್ನುವಂತೆ ಇಂದು ಪಾಕಿಸ್ತಾನ ದೇಶಕ್ಕೆ ಮಾರಕವಾಗಿದೆ ಎಂದರು. ಒಬ್ಬ ವೀರ ಸೇನಾನಿಯನ್ನು ನಾವು ಹೇಗೆ ನಡೆಸಿಕೊಂಡಿದ್ದೇವೆ ಎನ್ನುವ ಆತ್ಮಾವಲೋಕ ಮಾಡಿಕೊಳ್ಳಬೇಕು. ಯುವ ಜನಾಂಗ ನಿಜವಾದ ಸ್ವಾತಂತ್ರ್ಯ ಗಳಿಸಲು ಮುಂದಾಗಬೇಕಿದೆ ಎಂದರು. ನವ ವಸಾಹತು ಶಾಹಿ ಕಪಿ ಮುಷ್ಟಿಯಿಂದ ಹೊರತಂದು ಸ್ವಾಭಿಮಾನದ ಭಾರತವನ್ನು ಮುನ್ನಡೆಸಬೇಕಾಗಿದೆ ಎಂದರು.

ವಿಜಯನಗರ ಜಿಲ್ಲಾ ಪತಂಜಲಿ ಯೋಗ ಸಮಿತಿಯ ಪ್ರಭಾರಿ ಡಾ.ಎಫ್.ಟಿ. ಹಳ್ಳಿಕೇರಿ ಪ್ರಾಸ್ತಾವಿಕವಾಗಿಮಾತನಾಡಿದರು.
ಅಶೋಕ ಚಿತ್ರಗಾರ, ರಾಜ್ಯ ಯುವ ಪ್ರಭಾರಿ ಕಿರಣಕುಮಾರ, ಶ್ರೀರಾಮ, ಯರ್‍ರಿಯಪ್ಪ, ಪ್ರಕಾಶ ಕುಲಕರ್ಣಿ, ಶ್ರೀಧರ ಪಾಲ್ಗೊಂಡಿದ್ದರು. ನಾಗರತ್ನಾ, ಗಾಯಕ ಜಯಣ್ಣ, ಶ್ರೀಧರಟ ವಿಠೋಬ ನಿರ್ವಹಿಸಿದರು.

# ವಿಜಯನಗರ ಜಿಲ್ಲೆಯಲ್ಲಿ ಜ.26ರಿಂದ ಫೆ.23ರವರೆಗೆ ಸಂವಿಧಾನ ಜಾಗೃತಿ ಜಾಥಾ

**ಹಂಪಿ ಟೈಮ್ಸ್ ಹೊಸಪೇಟೆ**
ಸಂವಿಧಾನ ಜಾಗೃತಿ ಜಾಥವು ವಿಜಯನಗರ ಜಿಲ್ಲೆಯಲ್ಲಿ 137 ಗ್ರಾಮ ಪಂಚಾಯತಿಗಳಿಗೆ, 08 ನಗರಸಭೆ, ಪುರಸಭೆ, ಪಟ್ಟಣ ಪಂಚಾಯತಿಗಳಿಗೆ ಜನವರಿ 26 ರಿಂದ ಫೆ.23ರವರೆಗೆ ಒಟ್ಟು 28 ದಿನಗಳ ಕಾಲ ಸಂಚರಿಸಲಿದೆ ಎಂದು ವಿಜಯನಗರ ಜಿಲ್ಲೆಯ ಸಮಾಜ ಕಲ್ಯಾಣ ಇಲಾಖೆಯ ಉಪ ನಿರ್ದೇಶಕರಾದ ಮಂಜುನಾಥ ಹೆಚ್.ವಿ. ಅವರು ತಿಳಿಸಿದ್ದಾರೆ.

ಜಿಲ್ಲೆಯ ಎಲ್ಲಾ ಜನಪ್ರತಿನಿಧಿಗಳು, ಅಧಿಕಾರಿಗಳು, ಸಾರ್ವಜನಿಕರು, ವಿದ್ಯಾರ್ಥಿಗಳು, ಯುವಜನರು ಹಾಗೂ ಎಲ್ಲಾ ಸಮುದಾಯದ ಸಂಘ-ಸಂಸ್ಥೆಗಳ ಮುಖಂಡರುಗಳು ಸಂವಿಧಾನದ ಮಹತ್ವ ಅರಿತುಕೊಳ್ಳಲು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಸಂವಿಧಾನ ಜಾಗೃತಿ ಜಾಥಾ ಕಾರ್ಯಕ್ರಮವನ್ನು ಯಶಸ್ವಿಗೊಳಿಸಲು ಜಿಲ್ಲಾಡಳಿತದಿಂದ ಮನವಿ ಮಾಡುತ್ತೇನೆ ಎಂದು ಅವರು ತಿಳಿಸಿದ್ದಾರೆ.

ಭಾರತ ದೇಶವು 75ನೇ ಗಣರಾಜ್ಯೋತ್ಸವನ್ನು ಜನವರಿ 26, 2024 ರಂದು ಆಚರಿಸುತ್ತಿದೆ. ಈಗಾಗಲೇ ಕರ್ನಾಟಕ ರಾಜ್ಯ ಸರ್ಕಾರದಿಂದ ಭಾರತದ ಸಂವಿಧಾನದ ಪೀಠಿಕೆಯನ್ನು ಸರ್ಕಾರಿ, ಅರೆ ಸರ್ಕಾರಿ ಕಚೇರಿಗಳಲ್ಲಿ ಪ್ರದರ್ಶಿಸಲು ಹಾಗೂ ಶಾಲಾ ಕಾಲೇಜುಗಳಲ್ಲಿ ಬೆಳಗ್ಗಿನ ಪ್ರಾರ್ಥನ ಸಮಯದಲ್ಲಿ ಓದಲು ಆದೇಶಿಸಲಾಗಿರುತ್ತದೆ. ಇದರ ಭಾಗವಾಗಿ ಕರ್ನಾಟಕ ರಾಜ್ಯ ಸರ್ಕಾರವು ಸಂವಿಧಾನದ ಆಶಯಗಳನ್ನು ಈಡೇರಿಸುವ ಹಾಗೂ ಸಮ ಸಮಾಜವನ್ನು ನಿರ್ಮಿಸುವ ದ್ಯೇಯೋದ್ದೇಶದಿಂದ ಸಂವಿಧಾನ ಜಾಗೃತಿ ಜಾಥಾ ಎಂಬ ರಾಷ್ಟ್ರೀಯ ಮಟ್ಟದ ಸಮಾವೇಶ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ಕರ್ನಾಟಕ ರಾಜ್ಯದ ಎಲ್ಲಾ 31 ಜಿಲ್ಲೆಗಳಲ್ಲಿ ಏಕಕಾಲದಲ್ಲಿ ಜನವರಿ 26 2024 ರಂದು ಸಂವಿಧಾನ ಜಾಗೃತಿ ಜಾಥಾಕ್ಕೆ ಚಾಲನೆ ನೀಡಲಾಗುತ್ತಿದೆ. ಅದರಂತೆ ವಿಜಯನಗರ ಜಿಲ್ಲೆಯಲ್ಲಿ ಜನವರಿ 26ರಂದು ಸಂವಿದಾನ ಜಾಗೃತಿ ಜಾಥಕ್ಕೆ ಚಾಲನೆ ನೀಡಲಾಗುತ್ತಿದೆ. ಈ ಜಾಥದಲ್ಲಿ ಸಮಸಮಾಜದ ತತ್ವಪ್ರತಿಪಾದಕರಾದ ಬುದ್ದ, ಬಸವ, ಅಂಬೇಡ್ಕರ್‌ರವರ ಸ್ಥಬ್ದಚಿತ್ರ, ಸಂವಿಧಾನದ ಪೀಠಿಕೆ ಹಾಗೂ ವಿಜಯನಗರ ಸಾಮ್ರಾಜ್ಯದ ಗತವೈಭವವನ್ನು ಪ್ರದರ್ಶಿಸುವ ಹಂಪಿಯ ಕಲ್ಲಿನ ರಥ, ಉಗ್ರನರಸಿಂಹ ಮೂರ್ತಿ ಹಾಗೂ ವಿಜಯನಗರ ಸಾಮ್ರಾಜ್ಯದ ರಾಜ ಲಾಂಛನದ ಸ್ಥಬ್ದಚಿತ್ರಗಳನ್ನು ಅಳವಡಿಸಲಾಗಿದೆ. ಜಾಥದಲ್ಲಿ ಎಲ್‌ಇಡಿ ಮೌಂಟೆಡ್ ಡಿಸ್ಪ್ಲೆ ಮೂಲಕ ಸಂವಿಧಾನದ ಮಹತ್ವ, ರಾಜ್ಯನಿರ್ದೇಶಕ ತತ್ವಗಳು, ನ್ಯಾಯ, ಸಾಮಾಜಿಕ, ಆರ್ಥಿಕ ಮತ್ತು ರಾಜಕೀಯಕ್ಕೆ ಸಂಬಂಧಿಸಿದಂತೆ ಡಾ.ಬಿ.ಆರ್.ಅಂಬೇಡ್ಕರ್ ಅವರ ಪರಿಕಲ್ಪನೆ, ಬಸವಣ್ಣನವರ ವಚನಗಳು ಮತ್ತು ಮೂಲಭೂತ ಹಕ್ಕುಗಳು ಮತ್ತು ಕರ್ತವ್ಯಗಳ ಬಗ್ಗೆ ಸಾರ್ವಜನಿಕರಿಗೆ ಮುಖ್ಯವಾಗಿ ಯುವಜನರಿಗೆ ಅರಿವು ಮೂಡಿಸಲಾಗುವುದು.

ಸಂವಿಧಾನದ ಪೀಠಿಕೆಯ ಪ್ರತಿಗಳನ್ನು ಮೆರವಣಿಗೆಯ ಉದ್ದಕ್ಕೂ ವಿತರಿಸುತ್ತಾ, ಸಂವಿಧಾನದ ಬಗ್ಗೆ ಅರಿವು ಮೂಡಿಸುವ ಕೆಲಸ ಮಾಡುತ್ತದೆ. ರಾಜ್ಯವು ತನ್ನ ಆರ್ಥಿಕ ಸಾಮರ್ಥ್ಯ ಮತ್ತು ಅಭಿವೃದ್ಧಿಯ ಪರಿಮಿತಿಯಲ್ಲಿ ಉದ್ಯೋಗ, ಶಿಕ್ಷಣ ಹಕ್ಕುಗಳನ್ನು ಪಡೆಯಲು ಹಾಗೂ ನಿರುದ್ಯೋಗ, ವೃದ್ಯಾಪ್ಯ, ಅನಾರೋಗ್ಯ ಮತ್ತು ಅಸಮರ್ಥತೆಯ ಸಂದರ್ಭಗಳಲ್ಲಿ ಸಹಾಯ ನೀಡಲು ಪರಿಣಾಮಕಾರಿ ಅವಕಾಶಗಳನ್ನು ಕಲ್ಪಿಸುವ ನಿಟ್ಟಿನಲ್ಲಿ ಕರ್ನಾಟಕ ಸರ್ಕಾರದ ಮಹತ್ವಕಾಂಕ್ಷಿಯ 5 ಖಾತ್ರಿಗಳಾದ ಗೃಹಲಕ್ಷ್ಮೀ, ಗೃಹಜ್ಯೋತಿ, ಅನ್ನಭಾಗ್ಯ, ಯುವನಿದಿ, ಸ್ತ್ರೀ-ಶಕ್ತಿ ಯೋಜನೆಗಳ ಬಗ್ಗೆ ವ್ಯಾಪಕ ಪ್ರಚಾರ ನೀಡಿ ಸಾರ್ವಜನಿಕರು ಸದುಪಯೋಗಪಡಿಸಿಕೊಳ್ಳುವಂತೆ ಅರಿವು ಮೂಡಿಸುತ್ತದೆ ಎಂದರು.

Printed by: MANJUNATHA .H .B Published by: A. SHUBHA. Owned by: A. SHUBHA and Printed at : AMRITH PRINTERS, No. 63/A, Opp. Police Station, Ramanagara, Hagaribommanahalli – 583212, Vijayanagara Dist., Karnataka. Published at : At Ward No.15, Near Bannimahankali Temple, 3rd Cross, New Amaravathi, Hospet - 583201, Vijayanagara Dist., Karnataka. Editor : BASAPUR BASAVARAJA